ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 184

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಮಂಗಳವಾರ: 30-06-2026


## ಎಸ್ಐಆರ್ : ಅರ್ಹರು ಅವಕಾಶ ವಂಚಿತರಾಗದಂತೆ ಎಚ್ಚರಿಕೆ ವಹಿಸಲು ಪ್ರಿಯಾಂಕ್ ಖರ್ಗೆ ಆಗ್ರಹ

**ಬೆಂಗಳೂರು, ಜೂ.29–** ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಅರ್ಹ ಮತದಾರರನ್ನು ಅವಕಾಶ ವಂಚಿತರಾಗದಂತೆ ಎಚ್ಚರಿಕೆ ವಹಿಸಬೇಕೆಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಆಗ್ರಹಿಸಿದ್ದಾರೆ.ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮತದಾರರ ಪಟ್ಟಿ ತೀವ್ರ ಪರಿಷ್ಕರಣೆಗೆ ನಮ ವಿರೋಧವಿಲ್ಲ. ಎಸ್ಐಆರ್ ಪ್ರಕ್ರಿಯೆ ಚುನಾವಣಾ ಆಯೋಗದ ಹಕ್ಕು ಮತ್ತು ಖಡ್ಡಾಯ. ಅದಕ್ಕಿಂತಲೂ ಮುಖ್ಯವಾಗಿ ಶುದ್ಧವಾದ ಮತ್ತು ಉತ್ತಮವಾದ ಮತದಾರರ ಪಟ್ಟಿ ನೀಡುವುದು ಆಯೋಗದ ಜವಾಬ್ದಾರಿ ಎಂದು ಹೇಳಿದರು.

ಇತ್ತಿಚೆಗೆ ತಮಿಳುನಾಡು, ಕೇರಳ, ಪಶ್ಚಿಮಬಂಗಾಳ ಸೇರಿದಂತೆ ಹಲವು ಕಡೆಗಳಲ್ಲಿ ಎಸ್ಐಆರ್ ನಡೆದಾಗ, ಬಡವರನ್ನು ಅವಕಾಶದಿಂದ ವಂಚಿತರನ್ನಾಗಿ ಮಾಡಲಾಗಿದೆ. ಹೀಗಾಗಿ ಆಯೋಗಕ್ಕೆ ನಾವು ಕೆಲ ಪ್ರಶ್ನೆಗಳನ್ನು ಕೇಳಿದ್ದೇವೆ. ಅವುಗಳಿಗೆ ಈವರೆಗೂ ಉತ್ತರ ಬಂದಿಲ್ಲ ಎಂದರು.ಪಶ್ಚಿಮಬಂಗಾಳದಲ್ಲಿ 89 ಲಕ್ಷ ಜನರನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ. ಅವರಿಗೆ ನ್ಯಾಯಧೀಕರಣದಲ್ಲೂ ಪ್ರಶ್ನೆ ಮಾಡಲು ಅವಕಾಶ ಇಲ್ಲವಾಗಿದೆ. ನ್ಯಾಯಧೀಕರಣದಲ್ಲಿ ಒಬ್ಬ ನ್ಯಾಯಾಧೀಶರು ರಾಜೀನಾಮೆ ನೀಡಿದ್ದಾರೆ. ಮತದಾರರ ಪಟ್ಟಿ ಪರಿಷ್ಕರಣೆ ಏಕಾಏಕಿ ಸಾಧ್ಯವಿಲ್ಲ. 4 ವರ್ಷ ಸಮಯ ಬೇಕು ಎಂದಿದ್ದಾರೆ. ಆಯೋಗದ ಅಧಿಕಾರಿಗಳು ನಾವು ಕೇಳುವ ಪ್ರಶ್ನೆಗಳಿಗೆ ಉತ್ತರ ನೀಡಿ, ಬಳಿಕ ಎಸ್ಐಆರ್ ಮಾಡಲಿ ಎಂದು ಹೇಳಿದರು.

ಬಲವಂತವಾಗಿ ರೈತರಿಂದ ಭೂಮಿ ವಶಪಡಿಸಿಕೊಳ್ಳಲು ಸಾಧ್ಯವಿಲ್ಲ. ಭೂ ಸ್ವಾಧೀನ ಕಾಯ್ದೆ ಸ್ಪಷ್ಟವಾಗಿದೆ. ರೈತರು ಸ್ವ ಇಚ್ಛೆಯಿಂದ ಭೂಮಿ ಕೊಟ್ಟರೆ, ಅಲ್ಲಿ ಅಭಿವೃದ್ಧಿ ಯೋಜನೆಗಳಾಗುತ್ತವೆ. ದೇವನಹಳ್ಳಿ ಬಳಿಯ ಚನ್ನರಾಯ ಪಟ್ಟಣದ ಸಮೀಪ ಭೂ ಸ್ವಾಧೀನಕ್ಕೆ ವಿರೋಧ ವ್ಯಕ್ತವಾಯಿತು.



ಸರ್ಕಾರ ರೈತರ ಪರವಾಗಿ ನಿರ್ಧಾರ ಕೈಗೊಂಡಿದೆ. ಈಗ ಅದೇ ರೈತರು ನಮಗೆ ಕೈಗಾರಿಕೆ ಬೇಕು ಎಂದು ಬೇಡಿಕೆ ಸಲ್ಲಿಸುತ್ತಿದ್ದಾರೆ. ಸರ್ಕಾರ ಪರಿಶೀಲನೆ ಮಾಡುತ್ತಿದೆ ಎಂದು ಹೇಳಿದರು.

2018ರಲ್ಲಿ ನಮ ಮನೆ ಬಾಗಿಲಿಗೆ ಯಾರೆಲ್ಲಾ ಬಂದಿದ್ದರು ಎಂದು ಗೊತ್ತಿದೆ ಎಂಬ ಕುಮಾರಸ್ವಾಮಿ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಪ್ರಿಯಾಂಕ್ ಖರ್ಗೆ, ಆಗ ಯಾರೆಲ್ಲಾ ಹೋಗಿ ಸರ್ಕಾರ ರಚಿಸಿದ್ದರು ಮತ್ತು ಜೆಡಿಎಸ್–ಕಾಂಗ್ರೆಸ್ ಸಮಿಶ್ರ ಸರ್ಕಾರ ಹೇಗೆ ಪಥನವಾಯಿತು ಎಂದು ನಮಗೂ ಚೆನ್ನಾಗಿ ಗೊತ್ತಿದೆ. ಇದೇ ಕುಮಾರಸ್ವಾಮಿಯವರು ಆಗ ಆರ್ಎಸ್ಎಸ್ ಅನ್ನು ವಿಷ ಜಂತು ಎಂದು ನಿಂದಿಸಿ, ಲೇಖನ ಬರೆದಿದ್ದರು. ಕಾಂಗ್ರೆಸ್ ಮತ್ತು ಜೆಡಿಎಸ್ ಸಿದ್ಧಾಂತಗಳು ಒಂದೇ ಎಂದು ಹೇಳಿಕೊಳ್ಳುತ್ತಿದ್ದರು. ಈಗ ಅವರ ಸಿದ್ಧಾಂತ ಬದಲಾಗಿದೆ. ಮನೆ ಬಾಗಿಲಿಗೆ ಯಾರೆಲ್ಲಾ ಬಂದಿದ್ದರೂ ಎಂಬ ಬಗ್ಗೆ ಬೇಕಿದ್ದರೆ ಕುಮಾರಸ್ವಾಮಿಯವರು ಆತಕಥನದಲ್ಲಿ ಬರೆದುಕೊಳ್ಳಲಿ. ನಾವು ನಮಗೆ ಗೊತ್ತಿರುವ ವಿಚಾರಗಳನ್ನು ಬರೆದುಕೊಳ್ಳುತ್ತೇವೆ ಎಂದು ಹೇಳಿದರು. ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಯ ವಿಚಾರವಾಗಿ ವಿರೋಧ ಪಕ್ಷಗಳಿಂದ ನಾವು ಪಾಠ ಕಲಿಯಬೇಕಿಲ್ಲ, ಕಲ್ಯಾಣ ಕರ್ನಾಟಕ ಭಾಗಕ್ಕೆ 371ಜೆ ಅಡಿಯಲ್ಲಿ ವಿಶೇಷ ಸ್ಥಾನಮಾನ ನೀಡಲು ವಿರೋಧ ಮಾಡಿದ್ದು, ಬಿಜೆಪಿಯವರು. ಆ ಪ್ರಸ್ತಾವನೆಯನ್ನು ಆಗಿನ ಕೇಂದ್ರ ಸರ್ಕಾರ ತಿರಸ್ಕರಿಸಿತ್ತು.ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ವಾರ್ಷಿಕ 1 ಸಾವಿರ ಕೋಟಿ ರೂ.ಗಳಿಗಿಂತಲೂ ಕಡಿಮೆ ಅನುದಾನ ನೀಡಲಾಗಿತ್ತು. ನಮ ಸರ್ಕಾರ 5 ಸಾವಿರ ಕೋಟಿ ರೂ. ನೀಡಿದೆ. ಬಿಜೆಪಿ ಅವಧಿಯಲ್ಲಿ ಆರ್ಎಸ್ಎಸ್ ಮಾನವ ಸಂಪನೂಲ ಸಂಸ್ಥೆ ರಚಿಸಿ 300 ಕೋಟಿ ರೂ. ದುಡ್ಡು ಹೊಡೆಯುವ ಪ್ರಯತ್ನ ಮಾಡಿದ್ದರು ಎಂದು ಆರೋಪಿಸಿದ್ದಾರೆ.

ಬಿಜೆಪಿಯವರು ಕಲ್ಯಾಣ ಕರ್ನಾಟಕ ಭಾಗದಲ್ಲಿ ಇಎಸ್ಐ, ಜಯದೇವ, ಕಿದ್ವಾಯ್ ನಂತಹ ಆಸ್ಪತ್ರೆಗಳನ್ನು ಕಟ್ಟಿಸಿದ್ದಾರೆಯೇ? ರೈಲು ನಿಲ್ದಾಣ, ವಿಮಾನ ನಿಲ್ದಾಣಗಳನ್ನು ನಿರ್ಮಿಸಿದ್ದಾರೆಯೇ? ಇದನ್ನೆಲ್ಲಾ ಮಾಡಿದ್ದು ನಾವು ಎಂದು ತಿರುಗೇಟು ನೀಡಿದರು.ಕೆಂಪೇಗೌಡ ಜಯಂತಿಯ ಸಂದರ್ಭದಲ್ಲಿ ಚಿಕ್ಕಬಳ್ಳಾಪುರದಲ್ಲಿ ಶಾಸಕ ಪ್ರದೀಪ್ ಈಶ್ವರ್ ಅವರ ವಿರುದ್ಧ ಚಪ್ಪಲಿ ತೂರಿದ ವ್ಯಕ್ತಿಗಳ ವಿರುದ್ಧ ದೂರು ಆಧರಿಸಿ ಕ್ರಮ ಕೈಗೊಳ್ಳಲಾಗಿದೆ. ಪ್ರಚೋದನೆ ನೀಡಿದ್ದಾರೆ ಎಂಬುದಾದರೆ, ಅದಕ್ಕೆ ಸಂಬಂಧಪಟ್ಟಂತೆಯೂ ದೂರು ನೀಡಲಿ, ನಾವು ಪರಿಶೀಲನೆ ನಡೆಸಿ, ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿದರು.

ಕಳೆದ ಎರಡು ವಾರಗಳಿಂದ ನಡೆದಿರುವ ಮಹಿಳೆಯರ ಕೊಲೆ ಪ್ರಕರಣದಲ್ಲಿ ಪರಸ್ಪರ ಪರಿಚಯ–ಸಂಬಂಧಗಳು ಕಂಡು ಬಂದಿವೆ. ಇದು ಕಾನೂನು ಸುವ್ಯವಸ್ಥೆಯ ಸಮಸ್ಯೆಯಲ್ಲ ಎಂದು ಹೇಳಿದರು.ವಿಬಿ–ಜಿರಾಮ್–ಜಿ ಯೋಜನೆಯಡಿ ರಾಜ್ಯ ಸರ್ಕಾರಗಳ ಮೇಲೆ ಶೇ. 40ರಷ್ಟು ಆರ್ಥಿಕ ಹೊರೆ ಹಾಕಿರುವುದನ್ನು ಬಿಜೆಪಿ ಆಡಳಿತದಲ್ಲಿರುವ ರಾಜ್ಯಗಳೇ ವಿರೋಧ ಮಾಡಿವೆ ಎಂದು ಅವರು ಹೇಳಿದರು.

## ಹಿರೇಕೊಟ್ನೆಕಲ್ ಪ್ರಾ,ಕೃ,ಪ,ಸ,ಸಂಘದ ಅಧ್ಯಕ್ಷರಾಗಿ ಎಸ್.ಸುರೇಂದ್ರ ಸಾಹುಕಾರ ಆಯ್ಕೆ.



ಧೈರ್ಯದ ದಾರಿ

**ಮಾನ್ವಿ.:** ಹಿರೇಕೊಟ್ನೆಕಲ್ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಸೋಮವಾರ ನಡೆದ ಚುನಾವಣೆಯಲ್ಲಿ ಎಸ್.ಸುರೇಂದ್ರ ಸಾಹುಕಾರ ಅವಿರೋಧವಾಗಿ ಆಯ್ಕೆಯಾದರು. ಬಿ.ರಾಜಶೇಖರ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರಿಂದ ತೆರವಾದ ಸ್ಥಾನಕ್ಕೆ ಇಂದು ಅಧ್ಯಕ್ಷರ ಆಯ್ಕೆಗೆ ದಿನ ನಿಗದಿ ಮಾಡಲಾಗಿತ್ತು. ಅಧ್ಯಕ್ಷ ಸ್ಥಾನಕ್ಕೆ ಎಸ್.ಸುರೇಂದ್ರ ಸಾಹುಕಾರ, ಎಸ್.ಹನುಮಂತಗೌಡ, ರಾಘವೇಂದ್ರ ನಾಮಪತ್ರಗಳನ್ನು ಸಲ್ಲಿಸಿದ್ದರು. ಕೊನೆ ಘಳಿಗೆಯಲ್ಲಿ ಎಸ್. ಹನುಮಂತಗೌಡ, ರಾಘವೇಂದ್ರ ತಮ್ಮ ನಾಮಪತ್ರಗಳನ್ನು ಹಿಂಪಡೆದಿದ್ದರಿಂದ ಎಸ್.ಸುರೇಂದ್ರ ಸಾಹುಕಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಪ್ರಾ,ಕೃ,ಪ,ಸ,ಸಂಘದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದೇವರೆಡ್ಡಿ ಮುದ್ದಂಗುಡ್ಡಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಪ್ರಾ,ಕೃ,ಪ,ಸ,ಸಂಘದ ಉಪಾಧ್ಯಕ್ಷ ಚಂದ್ರಶೇಖರ ಭೋವಿ, ನಿರ್ದೇಶಕರಾದ ಡಾ. ಎಸ್. ಹನುಮಂತಗೌಡ ರಾಜಶೇಖರ ಬಿ.ನಾಗನಗೌಡ ಕೊಟ್ನೆಕಲ್, ಚನ್ನಬಸವ ಹೆಚ್. ಅಮರಪ್ಪ, ವೀರೇಶನಾಯಕ, ರಾಘವೇಂದ್ರ, ಬಸಮ್ಮ ಈರಣ್ಣ ಗೌಡ, ಭಾಗ್ಯಮ್ಮ ಶಿವಗೇನಿ, ನಾಗನಗೌಡ ಜೀನೂರು, ಸಿಬ್ಬಂದಿಗಳಾದ ಬಸವರಾಜ ಮಡಿವಾಳ, ವಿಜಯ ಪೋತ್ನಾಳ್ ಇದ್ದರು.

ಸನ್ಮಾನ : ಹಿರೇಕೊಟ್ನೆಕಲ್ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಅವಿರೋಧವಾಗಿ 2ನೇಪುಟಕ್ಕೆ

## ನಕಲಿ ದಾಖಲೆ, ಅನಧಿಕೃತ ಹುದ್ದೆ ಆರೋಪ: ಯಂಕೋಬ ಅಮಾನತಿಗೆ ಆಗ್ರಹ



ಧೈರ್ಯದ ದಾರಿ

**ಮಾನ್ವಿ:** ಗ್ರಾಮ ಪಂಚಾಯಿತಿ ಮದ್ಲಾಪುರದ ಕರ ವಸೂಲಿಗಾರ ಯಂಕೋಬ ತಂದೆ ಈರಣ್ಣ ಅವರ ವಿರುದ್ಧ ಸಲ್ಲಿಸಿರುವ ಹಲವು ಗಂಭೀರ ದೂರುಗಳ ಕುರಿತು ಇದುವರೆಗೆ ಯಾವುದೇ ಕ್ರಮ ಕೈಗೊಳ್ಳದಿರುವುದನ್ನು ಖಂಡಿಸಿ, ದಲಿತ ಸೇನೆ ವತಿಯಿಂದ ಸೋಮವಾರ ಮಾನ್ವಿ ತಾಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ವ್ಯವಸ್ಥಾಪಕ ಬಸವರಾಜ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ದಲಿತ ಸೇನೆ ಅಲ್ಪಸಂಖ್ಯಾತರ ಘಟಕದ ಜಿಲ್ಲಾಧ್ಯಕ್ಷ ತಾಜುದ್ದೀನ್ ಚೀಕಲಪರ್ವಿ, ಮದ್ಲಾಪುರ ಗ್ರಾಮ ಪಂಚಾಯಿತಿಯಲ್ಲಿ ಯಂಕೋಬ ಅವರ ವಿರುದ್ಧ ಅನಧಿಕೃತ ಹುದ್ದೆ ನಿರ್ವಹಣೆ, ನಕಲಿ ದಾಖಲೆಗಳು ಹಾಗೂ ನಕಲಿ ಸಹಿಗಳ ಬಳಕೆ, ಅಧಿಕಾರ ದುರ್ಬಳಕೆ ಸೇರಿದಂತೆ ಹಲವಾರು ಗಂಭೀರ ಆರೋಪಗಳ ಕುರಿತು ಹಲವು ಬಾರಿ ದಾಖಲೆ ಸಮೇತ ದೂರುಗಳನ್ನು ಸಲ್ಲಿಸಲಾಗಿದ್ದರೂ ತಿಂಗಳುಗಳು ಕಳೆದರೂ ಯಾವುದೇ ತನಿಖೆ ಅಥವಾ ಇಲಾಖಾ ಕ್ರಮ ಕೈಗೊಳ್ಳದಿರುವುದು ಅಧಿಕಾರಿಗಳ ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಆರೋಪಿಸಿದರು.

ಇತ್ತೀಚಿನ ದಿನಗಳಲ್ಲಿ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಂಡಿದ್ದು, ನೀರು ಸರಬರಾಜು ಮಾಡುವ ಮೋಟಾರ್‌ಗಳು ಸುಟ್ಟು ಹೋಗುವುದು, ವಾಲ್ವ್ ಹಾಗೂ ಪೈಪ್‌ಗಳು ಮುರಿದು ಹೋಗುವುದು ಸೇರಿದಂತೆ ಹಲವು ಸಮಸ್ಯೆಗಳು ಮರುಕಳಿಸುತ್ತಿವೆ. ಈ ಎಲ್ಲ ಬೆಳವಣಿಗೆಗಳ ನಡುವೆಯೂ ಸಂಬಂಧಪಟ್ಟ ಅಧಿಕಾರಿಗಳು ಸಮಸ್ಯೆ ಬಗೆಹರಿಸುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ. ಯಂಕೋಬ ಅವರ ವಿರುದ್ಧ ಗಂಭೀರ ಆರೋಪಗಳಿದ್ದರೂ ಅವರನ್ನು ರಕ್ಷಿಸುವ ಪ್ರಯತ್ನ ನಡೆಯುತ್ತಿರುವ ಅನುಮಾನ 2ನೇಪುಟಕ್ಕೆ

## ಅಗ್ನಿವೀರ ಯೋಧ ಈರೇಶ ನಾಯಕ ಬೋಮ್ಮನಾಳಗೆ ಅದ್ದೂರಿ ಸ್ವಾಗತ ದೇಶಸೇವೆಗೆ ಯುವಕರು ಮುಂದಾಗಬೇಕು: ಶ್ರೀನಿವಾಸ ನಾಯಕ

ಧೈರ್ಯದ ದಾರಿ



**ಮಾನ್ವಿ:** ದೇಶದ ರಕ್ಷಣಾ ಸೇವೆಗೆ ಆಯ್ಕೆಯಾಗಿ ಅಗ್ನಿವೀರ ಸೇನಾ ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ಸ್ವಗ್ರಾಮಕ್ಕೆ ಆಗಮಿಸಿದ ಈರೇಶ ನಾಯಕ ಬೋಮ್ಮನಾಳ ಅವರಿಗೆ ಗ್ರಾಮಸ್ಥರು ಅದ್ದೂರಿ ಸ್ವಾಗತ ನೀಡಿ ಗೌರವಿಸಿದರು.

ಮಂತ್ರಾಲಯ ಕ್ರಾಸ್‌ನಿಂದ ಕಪಗಲ್ ಗ್ರಾಮದ ಸಿದ್ದರೂಢ ಮಠದವರೆಗೆ ಯೋಧನನ್ನು ಮೆರವಣಿಗೆಯ ಮೂಲಕ ಕರೆತಂದು ಹೂಮಾಲೆ ಹಾಕಿ, ಸಿಹಿ ಹಂಚಿ ಹಾಗೂ ಪಟಾಕಿ ಸಿಡಿಸುವ ಮೂಲಕ ಸಂಭ್ರಮಾಚರಣೆ ನಡೆಸಲಾಯಿತು. ಗ್ರಾಮದ ಬೀದಿಗಳಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಈ ಸಂದರ್ಭದಲ್ಲಿ ವಾಲ್ಮೀಕಿ ಸಮಾಜದ ಅಧ್ಯಕ್ಷ ಶ್ರೀನಿವಾಸ ನಾಯಕ ಮಾತನಾಡಿ, ಸೇನೆಯಲ್ಲಿ ಸೇವೆ ಸಲ್ಲಿಸುವ ಅವಕಾಶ ಎಲ್ಲರಿಗೂ ದೊರೆಯುವುದಿಲ್ಲ. ಧೈರ್ಯ, ಶಿಸ್ತು ಮತ್ತು ಪರಿಶ್ರಮದಿಂದ ಅಗ್ನಿವೀರ ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿರುವ ಈರೇಶ ನಾಯಕ ಬೋಮ್ಮನಾಳ ಗ್ರಾಮದ ಹೆಮ್ಮೆ ಹೆಚ್ಚಿಸಿದ್ದಾರೆ.

ಯುವಕರು ದೇಶಸೇವೆ ಹಾಗೂ ರಾಷ್ಟ್ರರಕ್ಷಣೆಯತ್ತ ಹೆಚ್ಚಿನ ಆಸಕ್ತಿ ಬೆಳೆಸಿಕೊಳ್ಳಬೇಕು. ಯೋಧರ ತ್ಯಾಗ, ಸಮರ್ಪಣೆ ಮತ್ತು ದೇಶಭಕ್ತಿಯ ಮನೋಭಾವ ಪ್ರತಿಯೊಬ್ಬರಿಗೂ ಆದರ್ಶವಾಗಬೇಕು ಎಂದು ಹೇಳಿದರು. ಗ್ರಾಮದ ಯುವಕ ಸೇನೆ ಸೇರಿರುವುದು ಇತರ ಯುವಕರಿಗೂ ಪ್ರೇರಣೆಯಾಗಿದ್ದು, ದೇಶಭಕ್ತಿಯ ಭಾವನೆ ಮತ್ತಷ್ಟು ಗಟ್ಟಿಗೊಂಡಿದೆ ಎಂದು ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಯೋಧನ ತಂದೆ ಬಸ್ಮಾಸೂರ ನಾಯಕ ಬೋಮ್ಮನಾಳ, ಮಹಾದೇವ ಉತ್ತರಭೂಪ, ಶಿಕ್ಷಕ ರಾಘವೇಂದ್ರ ನಾಯಕ ಗುಂಜಳ್ಳಿ, ಪತ್ರಕರ್ತ ಲಕ್ಷ್ಮಣರಾವ್ ಕಪಗಲ್, ಕರ್ಣ ನಾಯಕ ಬೋಮ್ಮನಾಳ, ನಾಗರಾಜ ನಾಯಕ ಬೋಮ್ಮನಾಳ, ಮಹಾದೇವ ಛಲುವಾದಿ, ಯೋಧನ ಸಹೋದರ ಭೀಮ ನಾಯಕ ಬೋಮ್ಮನಾಳ, ರತ್ನಕರ ನಾಯಕ, ಸ್ವಾಮಿ ಮಡಿವಾಳ ಸೇರಿದಂತೆ ಗ್ರಾಮಸ್ಥರು, ಹಿರಿಯರು, ಯುವಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಮತದಾರರು ಬೂತ್ ಮಟ್ಟದ ಅಧಿಕಾರಿಗಳಿಗೆ ಸಂಪೂರ್ಣ ಸಹಕಾರ ನೀಡಿ: ಜಿಲ್ಲಾ ಚುನಾವಣಾಧಿಕಾರಿ ಪೂವಿತಾ ಎಸ್. ಮನವಿ

ಧೈರ್ಯದ ದಾರಿ

**ರಾಯಚೂರು ಜೂನ್ 29:** ಜಿಲ್ಲೆಯ ಎಲ್ಲಾ ಅರ್ಹ ಮತದಾರರು ಎಸ್ಐಆರ್–2026ರ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿ ಬೂತ್ ಮಟ್ಟದ ಅಧಿಕಾರಿಗಳಿಗೆ ಸಂಪೂರ್ಣ ಸಹಕಾರ ನೀಡುವ ಮೂಲಕ ತಮ್ಮ ಮತ್ತು ತಮ್ಮ ಕುಟುಂಬದ ಎಲ್ಲ ಅರ್ಹ ಸದಸ್ಯರ ಹೆಸರುಗಳು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಪಟ್ಟಿಯನ್ನು ಸಮಗ್ರ, ನಿಖರ ಹಾಗೂ ದೋಷರಹಿತಗೊಳಿಸುವ ಉದ್ದೇಶದಿಂದ ವಿಶೇಷ ತೀವ್ರ ಪರಿಷ್ಕರಣೆ–2026ರ ಕಾರ್ಯಕ್ರಮವನ್ನು ರಾಜ್ಯಾದ್ಯಂತ ಕೈಗೊಳ್ಳಲಾಗಿದೆ. ಜೂನ್ 30ರಿಂದ ಜುಲೈ 29ರವರೆಗೆ ಬೂತ್ ಮಟ್ಟದ ಅಧಿಕಾರಿಗಳು ಮನೆ–ಮನೆಗೆ ಭೇಟಿ ನೀಡಿ ಮತದಾರರಿಗೆ ಎನುಮರೇಷನ್ ಫಾರಂ ವಿತರಿಸಿ, ನಮೂನೆ ಭರ್ತಿ ಮಾಡುವ ಕುರಿತು ಅಗತ್ಯ ಮಾರ್ಗದರ್ಶನ ನೀಡಲಿದ್ದಾರೆ. ಈ ಪರಿಷ್ಕರಣೆಯ ಅರ್ಹತಾ ದಿನಾಂಕ 01 ಅಕ್ಟೋಬರ್ 2026 ಆಗಿರುತ್ತದೆ. ಈ ಕಾರ್ಯಕ್ರಮದ ಅಂಗವಾಗಿ ಜೂನ್ 30 ರಿಂದ ಜುಲೈ 29ರವರೆಗೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್ಓ) ಮನೆ–ಮನೆಗೆ ಭೇಟಿ ನೀಡಿ ಮತದಾರರಿಗೆ ಎನುಮರೇಷನ್ ಫಾರಂ ವಿತರಿಸಿ, ನಮೂನೆ ಭರ್ತಿ ಮಾಡುವ ಕುರಿತು ಅಗತ್ಯ ಮಾರ್ಗದರ್ಶನ ನೀಡಲಿದ್ದಾರೆ ಹಾಗೂ ಭರ್ತಿ ಮಾಡಿದ ನಮೂನೆಗಳನ್ನು ಸ್ವೀಕರಿಸಿ ಸ್ವೀಕೃತಿ ರಸೀದಿಯನ್ನು ನೀಡಲಿದ್ದಾರೆ.

ಕಾರ್ಯಕ್ರಮದ ವೇಳಾಪಟ್ಟಿ: ಜೂನ್ 30ರಿಂದ ಜುಲೈ 29ರವರೆಗೆ ಮನೆ–ಮನೆಗೆ ಬಿಎಲ್ಒಗಳ ಭೇಟಿ ನೀಡಲಿದ್ದಾರೆ. ಆಗಸ್ಟ್ 05ರಂದು ಕರಡು ಮತದಾರರ ಪಟ್ಟಿ ಪ್ರಕಟಣೆ ಮಾಡಲಾಗುವುದು. ಆಗಸ್ಟ್ 05ರಿಂದ ಸೆಪ್ಟೆಂಬರ್ 04ರವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಕೆಗೆ ಅವಧಿ ನೀಡಲಾಗಿದೆ. ಆಗಸ್ಟ್ 05ರಿಂದ ಅಕ್ಟೋಬರ್ 04ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳ ವಿಲೇವಾರಿ ಮಾಡಲಾಗುವುದು. ಅಕ್ಟೋಬರ್ 07ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಣೆ ಮಾಡಲಾಗುವುದು.

ಮತದಾರರು ಮಾಡಬೇಕಾದದ್ದು: ಬಿಎಲ್ಒಗಳಿಗೆ ಸಂಪೂರ್ಣ ಸಹಕಾರ ನೀಡಬೇಕು. ಇಸಿಐ ನೆಟ್ ನಲಿ ಬಿಎಲ್ಒಗಳ ಮಾಹಿತಿಯನ್ನು ಪಡೆಯಬಹುದಾಗಿದೆ. ಎನುಮರೇಷನ್ ಫಾರಂ ಅನ್ನು ಸಂಪೂರ್ಣವಾಗಿ ಹಾಗೂ ನಿಖರವಾಗಿ ಭರ್ತಿ ಮಾಡಿ ಸಲ್ಲಿಸಬೇಕು. ಇತ್ತೀಚಿನ ಬಣ್ಣದ ಭಾವಚಿತ್ರವನ್ನು ಅಂಟಿಸಬಹುದು (ಕಡ್ಡಾಯವಲ್ಲ). ಭರ್ತಿ ಮಾಡಿದ ನಮೂನೆಯನ್ನು ಬಿಎಲ್ಓ ಅವರಿಗೆ ಸಲ್ಲಿಸಿ ಸ್ವೀಕೃತಿ ರಸೀದಿಯನ್ನು ಪಡೆಯಬೇಕು ಅಥವಾ ಆನ್‌ಲೈನ್ ಮೂಲಕ https://voters.eci.gov.in/ ನಲ್ಲಿ ಭರ್ತಿ ಮಾಡಿ ಸಲ್ಲಿಸಬಹುದು. ಆಗಸ್ಟ್ 05ರಂದು ಪ್ರಕಟವಾಗುವ ಕರಡು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇರುವ ಕುರಿತು https://voters.eci.gov.in or https://ceo.karnataka.gov.in ನಲ್ಲಿ ಅಥವಾ ಸಂಬಂಧಪಟ್ಟ ಬಿಎಲ್ಒಗಳ ಬಳಿ ಪರಿಶೀಲಿಸಿಕೊಳ್ಳಬಹುದು.

ಹೆಸರು ಸೇರ್ಪಡೆ, ತಿದ್ದುಪಡಿ ಹಾಗೂ ಇತರೆ ಅರ್ಜಿಗಳು: ನಮೂನೆ–6 ಹೊಸ ಮತದಾರರ ನೋಂದಣಿ. ನಮೂನೆ–6ಎ ವಿದೇಶದಲ್ಲಿರುವ ಭಾರತೀಯ ಮತದಾರರ ನೋಂದಣಿ. ನಮೂನೆ–7 ಮತದಾರರ ಹೆಸರು ಅಳಿಸುವಿಕೆ. ನಮೂನೆ–8 ವಿವರಗಳ ತಿದ್ದುಪಡಿ, ವಿಳಾಸ ಬದಲಾವಣೆ, ಎಪಿಕ್ ಬದಲಾವಣೆ ಹಾಗೂ ಪಿಡಬ್ಲ್ಯುಡಿ ಗುರುತಿಸುವಿಕೆಯನ್ನು ಮಾಡಲಾಗುವುದು. ಅರ್ಜಿಗಳನ್ನು ಸಂಬಂಧಿಸಿದ ಬಿಎಲ್ಓ ಮುಖಾಂತರ ಅಥವಾ ಇಸಿಐ ನೆಟ್ ಮೊಬೈಲ್ ಅಪ್ ಮತ್ತು https://voters.eci.gov.in/ ಮೂಲಕ ಆನ್‌ಲೈನ್‌ನಲ್ಲಿಯೂ ಅರ್ಜಿ ಸಲ್ಲಿಸಬಹುದಾಗಿದೆ.

ರಾಯಚೂರು ಜಿಲ್ಲೆಯ ಎಲ್ಲಾ ಅರ್ಹ ಮತದಾರರು (ನಾಗರಿಕರು) ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್–2026) ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿ, ಬೂತ್ ಮಟ್ಟದ ಅಧಿಕಾರಿಗಳಿಗೆ ಸಂಪೂರ್ಣ ಸಹಕಾರ ನೀಡುವಂತೆ ಹಾಗೂ ತಮ್ಮ ಮತ್ತು ತಮ್ಮ ಕುಟುಂಬದ ಎಲ್ಲ ಅರ್ಹ ಸದಸ್ಯರ



ಹೆಸರುಗಳು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಚುನಾವಣಾ ನೋಂದಣಾಧಿಕಾರಿ (ಇಆರ್ಒ), ಸಹಾಯಕ ಚುನಾವಣಾ ನೋಂದಣಾಧಿಕಾರಿ (ಎಇಆರ್ಒ), ಬೂತ್ ಮಟ್ಟದ ಅಧಿಕಾರಿ (ಬಿಎಲ್ಒ) ಅವರನ್ನು ಸಂಪರ್ಕಿಸಬಹುದು ಅಥವಾ 1950 ಮತದಾರರ ಸಹಾಯವಾಣಿಗೆ ಕರೆ ಮಾಡಬಹುದಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೊದಲನೇ ಪುಟದಿಂದ

# ನಕಲಿ ದಾಖಲೆ, ಅನಧಿಕೃತ ಹುದ್ದೆ ಆರೋಪ: ಯಂಕೋಬ ಅಮಾನತಿಗೆ ಆಗ್ರಹ

ಸಾರ್ವಜನಿಕರಲ್ಲಿ ವ್ಯಕ್ತವಾಗುತ್ತಿದೆ ಎಂದು ಅವರು ಹೇಳಿದರು. ಯಂಕೋಬ ಅವರ ವಿರುದ್ಧ ಸಲ್ಲಿಸಿರುವ ಎಲ್ಲಾ ದೂರುಗಳ ಕುರಿತು ಹಿರಿಯ ಅಧಿಕಾರಿಗಳಿಂದ ನಿಷ್ಪಕ್ಷಪಾತ ತನಿಖೆ ನಡೆಸಬೇಕು,
ತನಿಖೆ ಪೂರ್ಣಗೊಳ್ಳುವವರೆಗೆ ಅಮಾನತುಗೊಳಿಸಬೇಕು, ನಕಲಿ ದಾಖಲೆಗಳು ಹಾಗೂ ಅನಧಿಕೃತ ಹುದ್ದೆ ನಿರ್ವಹಣೆ ದೃಢಪಟ್ಟಲ್ಲಿ ಕ್ರಿಮಿನಲ್ ಪ್ರಕರಣ ದಾಖಲಿಸಿ ಕಾನೂನು ಕ್ರಮ ಜರುಗಿಸಬೇಕು. ಅಲ್ಲದೆ, ಅನಧಿಕೃತವಾಗಿ ಪಡೆದ ಸರ್ಕಾರಿ ವೇತನವನ್ನು ವಸೂಲಿ ಮಾಡಬೇಕು ಹಾಗೂ ಕುಡಿಯುವ ನೀರಿನ ಸಮಸ್ಯೆಯನ್ನು ತಕ್ಷಣ ಪರಿಹರಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ದಲಿತ ಸೇನೆ ವತಿಯಿಂದ ಎಚ್ಚರಿಕೆ ನೀಡಲಾಗಿದ್ದು, ಈ ಮನವಿಗೂ ಯಾವುದೇ ಕ್ರಮ ಕೈಗೊಳ್ಳದಿದ್ದಲ್ಲಿ ತಾಲೂಕು ಪಂಚಾಯಿತಿ ಕಚೇರಿ ಎದುರು ಬೃಹತ್ ಪ್ರತಿಭಟನೆ, ಧರಣಿ ಹಾಗೂ ಹೋರಾಟ ಹಮ್ಮಿಕೊಳ್ಳಲಾಗುವುದು. ಇದರಿಂದ ಉಂಟಾಗುವ ಎಲ್ಲಾ ಹೊಣೆಗಾರಿಕೆ ಸಂಬಂಧಪಟ್ಟ ಅಧಿಕಾರಿಗಳ ಮೇಲಾಗಿರುತ್ತದೆ ಎಂದು ಎಚ್ಚರಿಸಲಾಗಿದೆ.
ಈ ಸಂದರ್ಭದಲ್ಲಿ ರಾಜಾಸಾಬ್ ನೀರಮಾನ್ವಿ, ಹಸನ್ ಚೀಕಲಪರ್ವಿ, ಗೋಕುಲ್, ಅಜಿತ್, ಸಿದ್ದರೆಡ್ಡಿ, ರೇಣುಕಾ ರಾಜ್ ಸೇರಿದಂತೆ ಇನ್ನಿತರರು ಇದ್ದರು.

# ಹಿರೇಕೊಟ್ನೆಕಲ್ ಪ್ರಾ,ಕೃ,ಪ,ಸ,ಸಂಘದ ಅಧ್ಯಕ್ಷರಾಗಿ ಎಸ್.ಸುರೇಂದ್ರ ಸಾಹುಕಾರ ಆಯ್ಕೆ.

ಆಯ್ಕೆಯಾದ ಎಸ್.ಸುರೇಂದ್ರ ಸಾಹುಕಾರ ಹಾಗೂ ನಿರ್ದೇಶಕರನ್ನು ಜಿಲ್ಲಾ ಪಂಚಾಯತ ಮಾಜಿ ಅಧ್ಯಕ್ಷ ದೊಡ್ಡಬಸ್ಸಪ್ಪಗೌಡ ಭೋಗಾವತಿ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಚಂದ್ರಶೇಖರ ಓತೂರು, ಎನ್.ವೀರನಗೌಡ, ಶಂಭುನಗೌಡ, ಅಮರಯ್ಯನಾಯಕ ಮ್ಯಾಕಲ್, ಅಮರಪ್ಪಗೌಡ ನಾಯ್ಕರ್, ಶಿವಕುಮಾರಸ್ವಾಮಿ, ಯಂಕೋಬಣ್ಣ ಭೋವಿ, ಖಾನಸಾಬ್, ರವಿಕುಮಾರಗೌಡ, ಎಂ.ಮಹೆಬೂಬ, ವಿರೇಶನಾಯಕ, ಕೆ.ವೈ.ಬಸವರಾಜನಾಯಕ, ರವಿಕುಮಾರ ಭೋವಿ, ಧರ್ಮರೆಡ್ಡಿ ಭೋವಿ, ಅಲ್ಲಾವುದ್ದೀನ್, ಬಸವರಾಜ ಖಾನಾಪುರು, ವಿರೇಶನಾಯಕ ಕ್ಯಾಂಪ್, ಅಮರೇಶನಾಯಕ ಹಾಗೂ ಪ್ರಾ,ಕೃ,ಪ,ಸ,ಸಂಘದ ಉಪಾಧ್ಯಕ್ಷ ಚಂದ್ರಶೇಖರ ಭೋವಿ, ನಿರ್ದೇಶಕರಾದ ರಾಜಶೇಖರ ಬಿ. ನಾಗನಗೌಡ ಕೊಟ್ನೆಕಲ್, ಚನ್ನಬಸವ ಹೆಚ್. ಅಮರಪ್ಪ, ವೀರೇಶನಾಯಕ, ನಾಗನಗೌಡ ಜೀನೂರು ಸೇರಿದಂತೆ ಅನೇಕರಿದ್ದರು.

# ಹಿರೇಕೊಟ್ನೆಕಲ್ ಪ್ರಾ,ಕೃ,ಪ,ಸ,ಸಂಘದ ಅಧ್ಯಕ್ಷ ಎಸ್.ಸುರೇಂದ್ರ ಸಾಹುಕಾರಗೆ ಸನ್ಮಾನ.



**ಮಾನ್ವಿ.:** ಹಿರೇಕೊಟ್ನೆಕಲ್ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆಯಾದ ಎಸ್.ಸುರೇಂದ್ರ ಸಾಹುಕಾರ ಹಾಗೂ ನಿರ್ದೇಶಕರನ್ನು ಜಿಲ್ಲಾ ಪಂಚಾಯತ ಮಾಜಿ ಅಧ್ಯಕ್ಷ ದೊಡ್ಡಬಸ್ಸಪ್ಪಗೌಡ ಭೋಗಾವತಿ ಸನ್ಮಾನಿಸಿ ಗೌರವಿಸಿದರು.
ಈ ಸಂದರ್ಭದಲ್ಲಿ ಮುಖಂಡರಾದ ಚಂದ್ರಶೇಖರ ಓತೂರು, ಎನ್.ವೀರನಗೌಡ, ಶಂಭುನಗೌಡ, ಅಮರಯ್ಯನಾಯಕ ಮ್ಯಾಕಲ್, ಅಮರಪ್ಪಗೌಡ ನಾಯ್ಕರ್, ಶಿವಕುಮಾರಸ್ವಾಮಿ, ಯಂಕೋಬಣ್ಣ ಭೋವಿ, ಖಾನಸಾಬ್, ರವಿಕುಮಾರಗೌಡ, ಎಂ.ಮಹೆಬೂಬ, ವಿರೇಶನಾಯಕ, ಕೆ.ವೈ.ಬಸವರಾಜನಾಯಕ, ರವಿಕುಮಾರ ಭೋವಿ, ಧರ್ಮರೆಡ್ಡಿ ಭೋವಿ, ಅಲ್ಲಾವುದ್ದೀನ್, ಬಸವರಾಜ ಖಾನಾಪುರು, ವಿರೇಶನಾಯಕ ಕ್ಯಾಂಪ್, ಅಮರೇಶನಾಯಕ ಹಾಗೂ ಪ್ರಾ,ಕೃ,ಪ,ಸ,ಸಂಘದ ಉಪಾಧ್ಯಕ್ಷ ಚಂದ್ರಶೇಖರ ಭೋವಿ, ನಿರ್ದೇಶಕರಾದ ರಾಜಶೇಖರ ಬಿ. ನಾಗನಗೌಡ ಕೊಟ್ನೆಕಲ್, ಚನ್ನಬಸವ ಹೆಚ್. ಅಮರಪ್ಪ, ವೀರೇಶನಾಯಕ, ನಾಗನಗೌಡ ಜೀನೂರು ಸೇರಿದಂತೆ ಅನೇಕರಿದ್ದರು.

# ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ : ಪೂವಿತ ಎಸ್.

ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ವಾಸವಿ ಕಾಲ್ಯಣ ಮಂಟಪದಲ್ಲಿ ತಾಲೂಕು ಆಡಳಿತದಿಂದ ನಡೆದ ಎಸ್.ಐ.ಆರ್. –2026 ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಕ್ರಮಕ್ಕೆ ರಾಯಚೂರು ಜಿಲ್ಲಾಧಿಕಾರಿ ಪೂವಿತ ಎಸ್. ಚಾಲನೆ ನೀಡಿ ಮಾತನಾಡಿ ಚುನಾವಣೆ ಅಯೋಗವು ದೇಶದಲ್ಲಿ ಪ್ರತಿ 10 ವರ್ಷಗಳಿಗೆ ಒಮ್ಮೆ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಮೂಲಕ ಮತಪಟ್ಟಿಯಲ್ಲಿ ಮೃತ ಮತದಾರರ ಹೇಸರುಗಳನ್ನು ಹಾಗೂ ಎರಡು ಕಡೆಗಳಲ್ಲಿ ಮತಪಟ್ಟಿಯಲ್ಲಿ ಹೆಸರುಗಳನ್ನು ಹೊಂದಿರುವವರನ್ನು . ಮತ್ತು ವಿದೇಶಗಳಲ್ಲಿ ಪೌರತ್ವವನ್ನು ಹೊಂದಿದವರನ್ನು ಪತ್ತೆ ಹಚ್ಚಿ ತೆಗೆದು ಹಾಕುವ ಮೂಲಕ ನೈಜ ಮತದಾರರನ್ನು ಮಾತ್ರ ಮತಪಟ್ಟಿಯಲ್ಲಿ ಉಳಿಸುವುದಕ್ಕಾಗಿ 2002 ರಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ನಡೆದಿತ್ತು ನಂತರ 24 ವರ್ಷಗಳ ನಂತರ ಪರಿಷ್ಕರಣೆ ನಡೆಸಲಾಗುತ್ತಿದೆ ಚುನಾವಣೆ ಆಯೋಗವು ನೈಜ ಮತದಾರರು ಪಟ್ಟಿಯಿಂದ ಹೋರಗುಳಿಯದಂತೆ ಪತಪಟ್ಟಿಯನ್ನು ತಯಾರಿಸುವುದಕ್ಕಾಗಿ ಹೆಚ್ಚಿನ ಅದ್ಯತೆಯನ್ನು ನೀಡಿದ್ದು ಇಗಾಗಲೇ ಬಿ.ಎಲ್.ಒ.ಅಧಿಕಾರಿಗಳಿಗೆ ಅಗತ್ಯ ತರಬೇತಿಯನ್ನು ನೀಡಲಾಗಿದು ಪ್ರತಿ ಹತ್ತು ಬಿ.ಎಲ್.ಒ.ಗಳಿಗೆ ಒಬ್ಬರನ್ನು ಮೇಲ್ವಿಚಾರಕರನ್ನು ಕೂಡ ನೇಮಕಮಾಡಲಾಗಿದೆ ನಮ್ಮ ಬಿ.ಎಲ್.ಒ.ಗಳು 2002 ಮತಪಟ್ಟಿಗಳಲ್ಲಿನ ಮತದಾರರನ್ನು ಹಾಗೂ 2025 ರಲ್ಲಿ ನಡೆದ ಚುನಾವಣೆಯ ಮತಪಟ್ಟಿಯೊಂದಿಗೆ ಮ್ಯಾಪಿಂಗ್ ಮಾಡುವ ಕಾರ್ಯ ಪ್ರಗತಿಯಲ್ಲಿದು ಮ್ಯಾಪಿಂಗ್ ಮಾಡುವ ಸಮಯದಲ್ಲಿ ಮತದಾರರು ಬಿಟ್ಟುಹೋಗದಂತೆ ನೋಡಿಕೊಳ್ಳುವುದಕ್ಕಾಗಿ ಪ್ರತಿ ಬೂತ್‌ಗೆ ಒಬ್ಬರಂತೆ ವಿವಿಧ ರಾಜಕೀಯ ಪಕ್ಷಗಳಿಗೆ ಸೇರಿದವರನ್ನು ಬಿ.ಎಲ್.ಎ.ಗಳಾಗಿ ನೇಮಕಮಾಡಿಕೊಳ್ಳುವ ಮೂಲಕ ಮತದಾರರ ಪಟ್ಟಿಗಳ ಪರಿಷ್ಕರಣೆಯನ್ನು ಪರಾದರ್ಶಕವಾಗಿ ನಡೆಸಲಾಗುತ್ತಿದೆ. ಬಿ.ಎಲ್.ಒ. ಹಾಗೂ ಬಿ.ಎಲ್.ಎ.ಗಳು ಪರಸ್ಪರ ಸಹಕಾರದಿಂದ ಕಾರ್ಯನಿರ್ವಹಿಸಿದಾಗ ಮಾತ್ರ ಎಸ್.ಐ.ಆರ್. –2026 ಯಶಸ್ವಿಯಾಗುವುದಕ್ಕೆ ಸಾಧ್ಯವಾಗುತ್ತದೆ. ಹೊಸ ಮತದಾರರು ಕೂಡ ಫಾರಂ ನಂ.6ರ ಮೂಲಕ ಮತಪಟ್ಟಿಯಲ್ಲಿ ಸೇರ್ಪಡೆಗೆ ಅರ್ಜಿ ಸಲ್ಲಿಸಬಹುದು. ಪ್ರತಿ ಬೂತ್‌ನಲ್ಲಿ 1200 ಮತದಾರರು ಇರುವಂತೆ ಹಾಗೂ ಒಂದು ಕುಟುಂಬದ ಸದಸ್ಯರೆಲ್ಲರು ಕೂಡ ಒಂದೆ ಬೂತ್‌ನಲ್ಲಿ



ಬರುವಂತೆ ಜೂಲೈ 29 ರವರೆಗೆ ಮ್ಯಾಪಿಂಗ್ ಮಾಡುವುದಕ್ಕೆ ಅವಕಾಶ ಕಲ್ಪಿಸಲಾಗಿದೆ. ಮಾನ್ವಿ ವಿಧಾನಸಭಾ ಕ್ಷೇತ್ರದ ಮಾನ್ವಿ ಮತ್ತು ಸಿರವಾರ ತಾಲೂಕುಗಳ ವ್ಯಾಪ್ತಿಯಲ್ಲಿ 2ಲಕ್ಷ 40 ಸಾವಿರ ಮತಪಟ್ಟಿಯಲ್ಲಿ ಹೆಸರಿರುವವರ ಮನೆ ,ಮನೆಗೆ ತೆರಳಿ ನಮ್ಮ ಬಿ.ಎಲ್.ಒ.ಗಳು ಎನುಮುರೇಷನ್ ಫಾರಂ ದ್ವಿಪ್ರತಿಯಲ್ಲಿ ನೀಡಿ ಸೂಕ್ತ ಮಾಹಿತಿಯೊಂದಿಗೆ ಫಾರಂ ಅನ್ನು ತುಂಬಿ ಸ್ವಕೃತಿಯನ್ನು ನೀಡಿ ನಂತರ ಡಿಜಟಲೀಕರಣ ಮಾಡಬೇಕು. ಬೇರೆ ರಾಜ್ಯಗಳಿಗೆ ವಲಸೆ ಹೋಗಿರುವವರು ಕೂಡ ಅನ್ ಲೈನ್ ಮೂಲಕ ಸಲ್ಲಿಸಬಹುದಾಗಿದೆ. ಗ್ರಾಮೀಣ ಭಾಗದ ಜನರಿಗೆ ಅಗತ್ಯ ಮಾಹಿತಿಯನ್ನು ನೀಡುವುದಕ್ಕಾಗಿ ಪ್ರತಿ ಗ್ರಾಮ ಪಂಚಾಯಿತಿಗೆ ಒಂದು ಮತದಾರರ ಸೌಲಭ್ಯ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು ಅಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಂದ ಸೂಕ್ತ ಮಾಹಿತಿಯನ್ನು ಪಡೆದು ಕೊಳ್ಳಬಹುದಾಗಿದೆ ಎಂದು ತಿಳಿಸಿದರು.
ರಾಯಚೂರು ಸಹಾಯಕ ಉಪ ವಿಭಾಗಾಧಿಕಾರಿ ಹಂಪ್ಪಣ್ಣ ಸಜ್ಜನ್, ತಹಸೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಅಗತ್ಯ ಮಾಹಿತಿಯನ್ನು ನೀಡಿದರು.
ಶಾಸಕ ಹಂಪಯ್ಯನಾಯಕ, ಗ್ರೇಡ್–2 ತಹಶೀಲ್ದಾರ್ ಅಬ್ದುಲ್ ವಾಹಿದ್, ತಾಲೂಕು ಪಂಚಾಯಿತಿ ಇ.ಓ. ಖಾಲಿದ್ ಅಹಮ್ಮದ್, ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ಡಿ, ಶಿಶುಅಭಿವೃದ್ಧಿ ಅಧಿಕಾರಿ ಶಿವಲಿಂಗಮ್ಮ ಸೇರಿದಂತೆ ಜೆ.ಡಿಎಸ್. ರಾಜ್ಯ ಯುವ ಘಟಕದ ಉಪಾಧ್ಯಕ್ಷರಾದ ರಾಜಾ ರಾಮಚಂದ್ರನಾಯಕ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್, ಜೆ.ಡಿಎಸ್.ತಾ.ಅಧ್ಯಕ್ಷರಾದ ಡಾ.ಈರಣ್ಣ ಮಾರ್ಲಟ್ಟಿ, ಬಿಎಸ್.ಪಿ, ರಾಜ್ಯ ಕಾರ್ಯದರ್ಶಿ ಶ್ಯಾಮಸುಂದರ ಕಂಬದಾಳ್, ತಾಲೂಕಿನ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಬಿ.ಎಲ್.ಒಗಳು ಹಾಗೂ ವಿವಿಧ ರಾಜಕೀಯ ಪಕ್ಷಗಳ ಬಿ.ಎಲ್.ಎ.ಗಳು ವಿವಿಧ ಪಕ್ಷಗಳ ಮುಖಂಡರು ಭಾಗವಹಿಸಿದರು.

# ಸಿರವಾರ ತಾಲೂಕಿನ ಮಲ್ಲಟ್ ಗ್ರಾಮದಲ್ಲಿ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನಕ್ಕೆ ಚಾಲನೆ

ಧೈರ್ಯದ ದಾರಿ

**ಸಿರವಾರ:** ಸಿರವಾರ ತಾಲೂಕಿನ ಮಲ್ಲಟ್ ಗ್ರಾಮದ ಸರ್ಕಾರಿ ಆಸ್ಪತ್ರೆಯಲ್ಲಿ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನವನ್ನು ರಮೇಶ್ ಭಂಡಾರಿ ಅವರು ಉದ್ಘಾಟಿಸಿದರು.
ಈ ಸಂದರ್ಭದಲ್ಲಿ ಮಾತನಾಡಿದ ರಮೇಶ್ ಭಂಡಾರಿ ಅವರು, "ಮಕ್ಕಳ ಆರೋಗ್ಯವನ್ನು ಕಾಪಾಡುವ ದೃಷ್ಟಿಯಿಂದ ಸರ್ಕಾರವು ಪಲ್ಸ್ ಪೋಲಿಯೊ ಅಭಿಯಾನವನ್ನು ಜಾರಿಗೆ ತಂದಿದೆ. ಪೋಷಕರು ಮತ್ತು ಗ್ರಾಮದ ಮುಖಂಡರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು. ಗ್ರಾಮದ ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ," ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಮಲ್ಲಟ್ ಸರ್ಕಾರಿ ಆಸ್ಪತ್ರೆಯ ವೈದ್ಯರಾದ ಹಸೀನಾ ಬಾನು, ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷ ಹನುಮಂತ, ಮಾಜಿ ಗ್ರಾಮ ಪಂಚಾಯತಿ ಸದಸ್ಯ ರವಿಕುಮಾರ್ ಚಲವಾದಿ,




ರಮೇಶ್ ಜಂಬಲದಿನ್ನಿ ಹಾಗೂ ಅಂಗನವಾಡಿ ಕಾರ್ಯಕರ್ತೆಯರಾದ ಕಾಮಾಕ್ಷಿ, ದುರ್ಗಮ್ಮ, ಚೆನ್ನಮ್ಮ ಸೇರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

# ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಸರಕಾರಿ ಸಾರ್ವಜನಿಕ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಶಿಶುಗಳಿಗೆ ಎರಡು ಹನಿ ಪೋಲಿಯೋ ಹನಿಗಳನ್ನು ಹಾಕುವ ಮೂಲಕ ಚಾಲನೆ ನೀಡಿ ಶಾಸಕ ಹಂಪಯ್ಯನಾಯಕ ಮಾತನಾಡಿ ವಿಶ್ವದ ವಿವಿಧ ದೇಶಗಳಲ್ಲಿ ಪೋಲಿಯೋ ವೈರಾಣುವಿನಿಂದ ಪೋಲಿಯೋ ಕಾಯಿಲೆ ಹರಡುತ್ತಿರುವುದನ್ನು ಗಂಭಿರವಾಗಿ ಪರಿಗಣಿಸಿರುವ ರಾಷ್ಟ್ರದ ಆರೋಗ್ಯ ಇಲಾಖೆಯು 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಉಚಿತವಾಗಿ ಪೋಲಿಯೋ ಲಸಿಕೆಯನ್ನು ಹಾಕುವುದಕ್ಕೆ ಕ್ರಮ ಕೈಗೊಂಡಿದ್ದು ಪಾಲಕರು ತಮ್ಮ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕೆಯನ್ನು ಹಾಕಿಸುವ ಮೂಲಕ ಅಂಗವಿಕಲತೆ ಬರದಂತೆ ತಡೆಗಟ್ಟಬೇಕು ಎಂದು ತಿಳಿಸಿದರು.
ತಾಲೂಕು ಆರೋಗ್ಯಧಿಕಾರಿ ಡಾ.ಶರಣಬಸವರಾಜ ಮಾತನಾಡಿ ತಾಲೂಕಿನಾಧ್ಯಂತ 4 ದಿನಗಳ ಕಾಲ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದು ಮೊದಲದಿನ ಬೂತ್ ಡೇ ಆಚರಣೆ ಮೂಲಕ ಬೂತ್‌ಗಳಲ್ಲಿ ಪಲ್ಸ್ ಪೋಲಿಯೋ ಲಸಿಕೆಯನ್ನು ಹಾಕಲಾಗುವುದು ನಂತರದ ಮೂರು ದಿನಗಳ ಕಾಲ ಮನೆ,ಮನೆಗೆ ತೆರಳಿ 5 ವರ್ಷದ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕೆಯನ್ನು ಹಾಕಲಾಗುವುದು ಅಖಂಡ ಮಾನ್ವಿ ತಾಲೂಕಿನಲ್ಲಿ ಒಟ್ಟು 47,877 ಮಕ್ಕಳನ್ನು ಗುರುತಿಸಲಾಗಿದು, ಅವರಲ್ಲಿ ಗ್ರಾಮೀಣ ಭಾಗದಲ್ಲಿ 10,870 ಮಕ್ಕಳಿಗೆ ಪೋಲಿಯೋ ಲಸಿಕೆಯನ್ನು ಹಾಕುವುದಕ್ಕೆ ಆಶಾ.ಅಂಗನವಾಡಿ ಕಾರ್ಯಕರ್ತರು ಸೇರಿದಂತೆ 222 ತಂಡಗಳನ್ನು ರಚಿಸಲಾಗಿದೆ. ಹೈರಿಸ್ಕ್ ಇರುವ 30 ಪ್ರದೇಶಗಳನ್ನು ಗುರುತಿಸಲಾಗಿದು 4 ಮೋಬೈಲ್ ತಂಡಗಳು ಹಾಗೂ 4 ಟ್ರಾನ್ಸಿಟ್ ಟೀಂ ಗಳು ಬಸ್ ನಿಲ್ದಾಣ ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿನ ಮಕ್ಕಳಿಗೆ ಪೋಲಿಯೋ ಲಸಿಕೆಯನ್ನು ಹಾಕಲಿವೇ. ಆರೋಗ್ಯ ಇಲಾಖೆಯೊಂದಿಗೆ ವಿವಿಧ ಇಲಾಖೆಯ ಅಧಿಕಾರಿಗಳು ಕೂಡ ಭಾಗವಹಿಸಿದು ಪಾಲಕರು ತಮ್ಮ ಮಕ್ಕಳಿಗೆ ಪೋಲಿಯೋ ಹನಿಗಳನ್ನು ಹಾಕಿಸುವ ಮೂಲಕ ಪೋಲಿಯೋ ಮುಕ್ತ ವಾಗಿಸಲು ಸಹಕಾರ ನೀಡಬೇಕು ಎಂದು ತಿಳಿಸಿದರು.
ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ಅಂಗವಾಗಿ ಆಸ್ಪತ್ರೆಯಲ್ಲಿ ನೂರಾರು ಮಕ್ಕಳಿಗೆ ಪೋಲಿಯೋ ಲಸಿಕೆಯನ್ನು ಹಾಕಲಾಯಿತು.
ಕಾರ್ಯಕ್ರಮದಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಸುಮಾನ್, ಮಕ್ಕಳ ತಜ್ಞರಾದ ಡಾ,ಶರಣಪ್ಪ, ತಹಸೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ,ತಾಲೂಕು ಪಂಚಾಯಿತಿ ಇ.ಓ. ಖಾಲಿದ್ ಅಹಮ್ಮದ್, ಶಿಶುಅಭಿವೃದ್ಧಿ ಅಧಿಕಾರಿ ಶಿವಲಿಂಗಮ್ಮ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್, ತಾಲೂಕು ಗ್ಯಾರಂಟಿ ಸಮಿತಿಅಧ್ಯಕ್ಷರಾದ ಬಿ.ಕೆ.ಅಮರೇಶಪ್ಪ. ಸೈಯಾದ್ ಖಾಲಿದ್ ಖಾದ್ರಿ, ಮುಖಂಡರಾದ ರಸುಲ್ ಖುರೇಶಿ,ಹಿದ್ದಾಯತ್ ನಾಯ್ಕ್,ಹಂಪಯ್ಯನಾಯಕ,ಕಾಮೇಶ್ ಸೇರಿದಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಸಿಬ್ಬಂದಿಗಳು ಪಾಲಕರು ಭಾಗವಹಿಸಿದರು.

# 5 ವರ್ಷದೊಳಗಿನ ಎಲ್ಲ ಮಕ್ಕಳಿಗೂ ಪೋಲಿಯೊ ಲಸಿಕೆ ಕಡ್ಡಾಯ: ಡಾ. ಶರಣಬಸವಗೌಡ




ಧೈರ್ಯದ ದಾರಿ

**ಮಾನ್ವಿ, ಜೂ.28:** 5 ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ರಾಷ್ಟ್ರೀಯ ಪಲ್ಸ್ ಪೋಲಿಯೊ ಅಭಿಯಾನದಡಿ ತಪ್ಪದೇ ಎರಡು ಹನಿ ಪೋಲಿಯೊ ಲಸಿಕೆ ಹಾಕಿಸಬೇಕು ಎಂದು ತಾಲೂಕು ವೈದ್ಯಾಧಿಕಾರಿ ಡಾ. ಶರಣಬಸವಗೌಡ ಹೇಳಿದರು.
ಮಾನ್ವಿ ಪಟ್ಟಣದ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಭಾನುವಾರ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನಕ್ಕೆ ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.ಪೋಲಿಯೊ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಪ್ರತಿಯೊಬ್ಬ ಪೋಷಕರೂ ತಮ್ಮ 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಪೋಲಿಯೊ ಲಸಿಕೆ ಹಾಕಿಸಬೇಕು. ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಆರೋಗ್ಯ ಇಲಾಖೆ ಅಗತ್ಯ ಕ್ರಮ ಕೈಗೊಂಡಿದ್ದು, ಸಾರ್ವಜನಿಕರು ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಕ್ಕಳ ತಜ್ಞ ಡಾ. ಶರಣಪ್ಪ ಡಿ., ಮುಖ್ಯ ವೈದ್ಯಾಧಿಕಾರಿ ಡಾ. ಸುಮನ್ ಸೇರಿದಂತೆ ಆರೋಗ್ಯ ಇಲಾಖೆ ವೈದ್ಯರು, ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಆಸ್ಪತ್ರೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಆರೋಗ್ಯದ ಕಡೆ ನಿರ್ಲಕ್ಷ್ಯ ಬೇಡ; ಜೀವನಶೈಲಿಯಲ್ಲಿ ಬದಲಾವಣೆ ಅಗತ್ಯ: ಡಾ. ಸಿ.ಎಂ. ಪಾಟೀಲ್



**ಯಾದಗಿರಿ:ಜೂ.29:**ಸಮಾಜದ ಸಮಸ್ಯೆಗಳನ್ನು ಬೆಳಕಿಗೆ ತರುವ ಜವಾಬ್ದಾರಿಯುತ ವೃತ್ತಿಯಲ್ಲಿ ತೊಡಗಿರುವ ಪತ್ರಕರ್ತರು ತಮ್ಮ ಆರೋಗ್ಯದ ಬಗ್ಗೆಯೂ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಆಶೀರ್ವಾದ ಆಸ್ಪತ್ರೆ ಮುಖ್ಯಸ್ಥ ಡಾ. ಸಿ.ಎಂ. ಪಾಟೀಲ್ ಹೇಳಿದರು.

ವೈದ್ಯರ ದಿನಾಚರಣೆ ಅಂಗವಾಗಿ ಆಶೀರ್ವಾದ ಆಸ್ಪತ್ರೆ ಹಾಗೂ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಲ್ಲಿ ಭಾನುವಾರ ನಗರದಲ್ಲಿ ಆಯೋಜಿಸಿದ್ದ ಪತ್ರಕರ್ತರಿಗಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಾಗೂ ವೈದ್ಯರೊಂದಿಗೆ ಸಮಾಲೋಚನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪತ್ರಕರ್ತರು ಸಮಾಜದ ಕನ್ನಡಿ ಇದ್ದಂತೆ. ಆಡಳಿತ ವ್ಯವಸ್ಥೆಯ ಲೋಪದೋಷಗಳನ್ನು ಜನರ ಮುಂದಿಡುವ ಮೂಲಕ ಪ್ರಾಮಾಣಿಕ ಸೇವೆ ಸಲ್ಲಿಸುತ್ತಿದ್ದಾರೆ. ನಿರಂತರ ಒತ್ತಡ, ಸಮಯದ ಅಭಾವದ ನಡುವೆಯೂ ಕಾರ್ಯನಿರ್ವಹಿಸುವ ಪತ್ರಕರ್ತರು ಆರೋಗ್ಯ ನಿರ್ಲಕ್ಷ್ಯ ಮಾಡದೆ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದರು.

ನಿತ್ಯ ವ್ಯಾಯಾಮ, ಯೋಗ, ಧ್ಯಾನಕ್ಕೆ ಆದ್ಯತೆ ನೀಡುವುದರ ಜೊತೆಗೆ ಆಹಾರ ಪದ್ಧತಿಯಲ್ಲಿ ಬದಲಾವಣೆ ಮಾಡಿಕೊಳ್ಳಬೇಕು. ಆರೋಗ್ಯವಾಗಿದ್ದರೆ ಮಾತ್ರ ವೃತ್ತಿಯಲ್ಲಿ ಪರಿಣಾಮಕಾರಿಯಾಗಿ ತೊಡಗಿಸಿಕೊಳ್ಳಲು ಸಾಧ್ಯ ಎಂದು ಸಲಹೆ ನೀಡಿದರು.

ದೃಷ್ಟಿ ಕಣ್ಣಿನ ಆಸ್ಪತ್ರೆ ಮುಖ್ಯಸ್ಥ ಡಾ. ಎಚ್. ಭೀಮರಡ್ಡಿ ಮಾತನಾಡಿ, ಮಾನವನ ದೇಹದ ಪ್ರಮುಖ ಅಂಗಗಳಲ್ಲಿ ಕಣ್ಣುಗಳು ಅತ್ಯಂತ ಅಮೂಲ್ಯವಾದವು. ಕಣ್ಣಿನ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸದೆ ನಿಯಮಿತ ತಪಾಸಣೆ ಮಾಡಿಸಿಕೊಳ್ಳಬೇಕು. ಸಣ್ಣ ಸಮಸ್ಯೆಗಳನ್ನು ನಿರ್ಲಕ್ಷಿಸಿದರೆ ಮುಂದಿನ ದಿನಗಳಲ್ಲಿ ಗಂಭೀರ ಪರಿಣಾಮ ಎದುರಾಗಬಹುದು ಎಂದು ಎಚ್ಚರಿಸಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಮಲ್ಲಪ್ಪ ಸಂಕೀನ್ ಮಾತನಾಡಿ, ಪತ್ರಕರ್ತರು ದಿನನಿತ್ಯದ ಒತ್ತಡದ ನಡುವೆ ಕಾರ್ಯನಿರ್ವಹಿಸುತ್ತಿದ್ದು, ಕೆಲವರು ಆರೋಗ್ಯದ ಕಡೆ ಗಮನ ನೀಡದೆ ಸಂಕಷ್ಟ ಎದುರಿಸಿರುವ ಉದಾಹರಣೆಗಳಿವೆ. ಹೀಗಾಗಿ ಪತ್ರಕರ್ತರು ತಮ್ಮ ಆರೋಗ್ಯವನ್ನು ಮೊದಲ ಆದ್ಯತೆಯಾಗಿ ಪರಿಗಣಿಸಬೇಕು ಎಂದರು.

ಪತ್ರಕರ್ತರ ಮೇಲೆ ಅವರ ಕುಟುಂಬದ ಜವಾಬ್ದಾರಿಯೂ ಇರುತ್ತದೆ. ತಮ್ಮನ್ನು ನಂಬಿರುವ ಕುಟುಂಬದವರಿಗಾಗಿ ಆರೋಗ್ಯ ಕಾಪಾಡಿಕೊಂಡು ಸಮಾಜ ಸೇವೆಯಾದ ಪತ್ರಿಕೋದ್ಯಮದಲ್ಲಿ ಮುಂದುವರಿಯಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಆಶೀರ್ವಾದ ಆಸ್ಪತ್ರೆ ಮುಖ್ಯಸ್ಥ ಡಾ. ಸಿ.ಎಂ. ಪಾಟೀಲ್ ಹಾಗೂ ದೃಷ್ಟಿ ಕಣ್ಣಿನ ಆಸ್ಪತ್ರೆ ಮುಖ್ಯಸ್ಥ ಡಾ. ಎಚ್. ಭೀಮರಡ್ಡಿ ಅವರನ್ನು ಸನ್ಮಾನಿಸಲಾಯಿತು.

# ಐದು ವರ್ಷದೊಳಗಿನ ಮಕ್ಕಳಿಗೆ ತಪ್ಪದೆ ಪೋಲಿಯೊ ಹನಿ ಹಾಕಿಸಿ



**ಕಲಬುರಗಿ:ಜೂ.29:** ಭಾರತ ಪೋಲಿಯೋ ಮುಕ್ತ ರಾಷ್ಟ್ರವಾಗಿದ್ದರು ಕೂಡಾ ನಮ್ಮ ನೆರೆ–ಹೊರೆ ರಾಷ್ಟ್ರಗಳಲ್ಲಿ ಇನ್ನೂ ಕಂಡುಬರುತ್ತಿರುವುದರಿಂದ ಅದು ವೈರಸ್ ನಮ್ಮ ದೇಶಕ್ಕೆ ತಗುಲಬಾರದೆಂದು ಮುಂಜಾಗ್ರತೆಯಾಗಿ ಪೋಲಿಯೊ ಹನಿಯನ್ನು ಹಾಕಲಾಗುತ್ತಿದೆ. ಮುಂಜಾಗ್ರತೆಯಾಗಿ ಐದು ವರ್ಷಗಳೊಳಗಿನ ಮಕ್ಕಳಿಗೆ ತಪ್ಪದೆ ಪೋಲಿಯೊ ಹನಿಯನ್ನು ಹಾಕಿಸುವ ಮೂಲಕ ಪೋಲಿಯೊ ರೋಗ ಬರದಂತೆ ತಡೆಯುವುದು ಎಲ್ಲರ ಕರ್ತವ್ಯವಾಗಿದೆ ಎಂದು ವೈದ್ಯಾಧಿಕಾರಿ ಡಾ.ಅನುಪಮಾ ಕೇಶ್ವಾರ ಹೇಳಿದರು.

ನಗರದ ಶೇಖರೋಜಾದಲ್ಲಿರುವ ಶಹಾಬಜಾರ 'ನಗರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಭಾನುವಾರ ಜರುಗುದ 'ಪೋಲಿಯೋ ಲಸಿಕಾಕರಣ'ದಲ್ಲಿ ಮಗುವಿಗೆ ಪೋಲಿಯೋ ಹನಿಯನ್ನು ಹಾಕಿ, ನಂತರ ಅವರು ಮಾತನಾಡುತ್ತಿದ್ದರು.

ಪೋಲಿಯೊ ಎಂಬುದು ವೈರಾಣುವಿನಿಂದ ಉಂಟಾಗುವ, ಗಂಭೀರ ಸಾಂಕ್ರಾಮಿಕ ಕಾಯಿಲೆಯಾಗಿದೆ. ಮಕ್ಕಳನ್ನು ಕಾಡುವು ಈ ಕಾಯಿಲೆಯು, ಜ್ವರ, ಸುಸ್ತು, ವಾಂತಿ, ತಲೆನೋವು, ಸ್ನಾಯು ಸೆಟೆದುಕೊಳ್ಳುವ ಲಕ್ಷಣಗಳನ್ನು ಹೊಂದಿದೆ. ಪ್ರತಿ 200 ಪ್ರಕರಣಗಳಲ್ಲಿ ಒಂದು ಪ್ರಕರಣವು ಶಾಶ್ವತ ಅಂಗವೈಕಲ್ಯಕ್ಕೆ ಎಡೆಮಾಡಿಕೊಡುವದರಿಂದ ನಿರ್ಲಕ್ಷ ಮಾಡುವುದು ಬೇಡ ಎಂದರು.

ಕಾರ್ಯಕ್ರಮದಲ್ಲಿ ಸಮಾಜ ಸೇವಕರಾದ ಎಚ್.ಬಿ.ಪಾಟೀಲ, ಶಿವಯೋಗೆಪ್ಪಾ ಎಸ್. ಬಿರಾದಾರ, ಪ್ರಮುಖರಾದ ಹಿರಿಯ ಅರೋಗ್ಯ ನಿರೀಕ್ಷಣಾಧಿಕಾರಿ ಸಂತೋಷ ಮುಳಜೆ, ಪ್ರಕಾಶ ಕೋಟಿ, ಆರೋಗ್ಯ ನಿರೀಕ್ಷಣಾಧಿಕಾರಿ ಮಲ್ಲಣ್ಣ ಟೋಕಪೂರ್, ಆರೋಗ್ಯ ಕೇಂದ್ರದ ಸಿಬ್ಬಂದಿಗಳಾದ ಜಗನಾಥ ಗುತ್ತೇದಾರ, ಮಂಗಲಾ ಚಂದಾಪುರೆ, ಶ್ರೀದೇವಿ, ರೇಶ್ಮಾ, ನಕ್ಕುಂದಿ, ನಾಗೇಶ್ವರಿ ಮುಗಳಿವಾಡಿ, ಚಂದ್ರಕಲಾ ಸೇರಿದಂತೆ ಇನ್ನಿತರರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ
ಸಂಪರ್ಕಿಸಿ
6360866626

# ಹವಾಮಾನದ ಆಧಾರದ ಮೇಲೆ ರೈತರಿಗೆ ಬೆಳೆ ಬೆಳೆಯಲು ಸಲಹೆ ನೀಡಿ: ಡಾ:ಯತೀಂದ್ರ ಸಿದ್ದರಾಮಯ್ಯ

**ಮೈಸೂರು, ಜೂ29:–** ಜಿಲ್ಲೆಯಲ್ಲಿ ಪೂರ್ವ ಮುಂಗಾರಿನಲ್ಲಿ ಮಳೆಯು ಕೊರತೆಯಾಗಿದ್ದು, ಮುಂದಿನ ದಿನಗಳಲ್ಲಿ ರೈತರಿಗೆ ಹವಾಮಾನ/ ಮಳೆಯ ಆಧಾರದ ಮೇಲೆ ಬೆಳೆ ಬೆಳೆಯಲು ಸಲಹೆ ನೀಡುವಂತೆ ನಗರಾಭಿವೃದ್ಧಿ ಹಾಗೂ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಪ್ರಕೃತಿ ವಿಕೋಪ ಮೇಲುಸ್ತುವಾರಿ ಸಚಿವ ಡಾ; ಯತೀಂದ್ರ ಸಿದ್ದರಾಮಯ್ಯ ಅವರು ತಿಳಿಸಿದರು. ಸಾಮಾಜಿಕಮಾಧ್ಯಮ ನಿರ್ವಹಣೆ



ಅವರು ಇಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕುಡಿಯುವ ನೀರು ಹಾಗೂ ಮುಂಗಾರು ಬಿತ್ತನೆಯ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದರು. ಮುಂದಿನ ಮಾಹೆಗಳಲ್ಲಿ ಮಳೆಯ ಕೊರತೆ ಉಂಟಾಗುವ ಸಾಧ್ಯತೆ ಇದ್ದು, ರೈತರು ನೀರಿನ ಬೇಡಿಕೆ ಹೆಚ್ಚಿರುವ ಬೆಳೆಗಳನ್ನು ಬೆಳೆಯದೇ, ಕಡಿಮೆ ನೀರಿನಲ್ಲಿ ಬೆಳೆಯಬಹುದಾದ ಜೋಳ, ರಾಗಿ, ಕಾಳುಗಳನ್ನು ಬೆಳೆಯಲು ಪ್ರೋತ್ಸಾಹಿಸಿ ಜಾಗೃತಿ ಮೂಡಿಸುವಂತೆ ತಿಳಿಸಿದರು.

ಹೆಚ್.ಡಿ.ಕೋಟೆ, ಪಿರಿಯಾಪಟ್ಟಣ ಭಾಗದಲ್ಲಿ ಬೆಳೆದಿರುವ ಜೋಳದ ಬೆಳೆಯಲ್ಲಿ ಬಿಳಿಸುಳಿ ರೋಗ ಕಂಡುಬಂದಿದ್ದು, ಇದಕ್ಕೆ ನೀಡಬೇಕಿರುವ ಔಷಧೋಪಚಾರ ಕುರಿತು ಹಾಗೂ ಬೆಳೆ ಪರಿವರ್ತನೆ ಕುರಿತು ಜಾಗೃತಿ ಮೂಡಿಸಿ ಎಂದರು.

ಮಳೆಯ ಕೊರತೆಯ ಹಿನ್ನಲೆಯಲ್ಲಿ ಹೊಸ ಬೋರ್ ವೆಲ್ ಗಳು ಕೊರೆಯುವ, ನೀರಿನ ಪೈಪ್ ಲೈನ್ ಕಾಮಗಾರಿಗಳು ನಡೆಯುತ್ತದೆ. ಈ ಸಂದರ್ಭದಲ್ಲಿ ಅರಣ್ಯ ಇಲಾಖೆ ಅವರು ವಿಳಂಬ ಮಾಡದೇ ನಿಯಮಾನುಸಾರ ಅನುಮತಿ ನೀಡಬೇಕು. ಅಗ್ನಿಶಾಮಕ ಇಲಾಖೆ ಹಾಗೂ ಅರಣ್ಯ ಇಲಾಖೆ ಅವರು ಅಗ್ನಿ ಅವಘಡಗಳಿಗೆ ಸಂಬಂಧಿಸಿದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಿಬೇಕು ಎಂದರು.

ಕುಡಿಯುವ ನೀರಿನ ಸಮಸ್ಯೆಗಳು ವಾಸ್ತವವಾಗಿ ಬೇರೆ ಹಾಗೂ ಅಧಿಕಾರಿಗಳು ನೀಡುವ ವಿವರ ಬೇರೆ ಬೇರೆ ಇರಬಾರದು. ಅಧಿಕಾರಿಗಳು ಆಗಿಂದಾಗೆ ಕುಡಿಯುವ ನೀರಿನ ಸಮಸ್ಯೆ ಇರುವ ಸ್ಥಳಗಳಿಗೆ ಭೇಟಿ ನೀಡಬೇಕು. ಬೋರ್ ವೆಲ್ ವ್ಯವಸ್ಥೆ ಇಲ್ಲದೆ ಇರುವ ಸ್ಥಳಗಳಲ್ಲಿ ಖಾಸಗಿ ಬೋರ್ ವೆಲ್ ಹಾಗೂ ಟ್ಯಾಂಕರ್ ವ್ಯವಸ್ಥೆ ಮಾಡಿಕೊಳ್ಳಬೇಕು. ಅರ್.ಡಿ.ಪಿ.ಆರ್ ಇಲಾಖೆಯಿಂದ ಬೋರ್ ವೆಲ್ ಕೊರೆಸಿದ ನಂತರ ನೀರು ಬಂದ ತಕ್ಷಣ ಕಾಮಗಾರಿ ಪೂರ್ಣವಾಯಿತು ಎನ್ನುವಂತಿಲ್ಲ. ಚೆಸ್ಕಾಂ ವತಿಯಿಂದ ವಿದ್ಯುತ್ ಸಂಪರ್ಕ ಕೊಡಿಸಿ ಸಾರ್ವಜನಿಕರಿಗೆ ಕುಡಿಯುವ ನೀರು ನೀಡಿದ ನಂತರ ಕಾಮಗಾರಿ ಪೂರ್ಣಗೊಂಡಿದೆ ಎಂದು ಪರಿಗಣಿಸಬೇಕು. ಕುಡಿಯುವ ನೀರಿಗಾಗಿ ಹೊಸ ಬೋರ್ ವೆಲ್ ಕೊರೆಸಿದಾಗ, ಖಾಸಗಿ ಬೋರ್ ವೆಲ್ ಹಾಗೂ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುವ ಸಂದರ್ಭದಲ್ಲಿ ನೀರಿನ ಸ್ಯಾಂಪಲ್ ಗಳನ್ನು ಪರಿಶೀಲಿಸಬೇಕು ಎಂದರು.

ಚಾಮರಾಜನಗರ ಜಿಲ್ಲೆಯ ನಗರ ಪಟ್ಟಣ ಪ್ರದೇಶಗಳಿಗೆ ನೀರು ಪೂರೈಕೆಗಾಗಿ ಅಮೃತ್ 2 ಯೋಜನೆಯಡಿ ಕೈಗೆತ್ತಿಕೊಂಡಿರು ಕಾಮಗಾರಿಯನ್ನು ವೇಗವಾಗಿ ಮುಗಿಸಿ ಜನರಿಗೆ ನೀರೊದಗಿಸಿ ಎಂದರು.

ಮೈಸೂರು ನಗರ ವ್ಯಾಪ್ತಿಯಲ್ಲಿ ಕುಡಿಯುವ ನೀರಿಗೆ ಸಂಬಂಧಿಸಿದಂತೆ ವಾರ್ಡವಾರು ಇರುವ ಸಮಸ್ಯೆ ಗಳನ್ನು ಮಹಾನಗರ ಪಾಲಿಕೆ ವತಿಯಿಂದ ಪಟ್ಟಿ ಮಾಡಿ ಒದಗಿಸಬೇಕು. ಆಗಮಾತ್ರ ಸಮಸ್ಯೆಗಳನ್ನು ವಿಸ್ತಾರವಾಗಿ ಚರ್ಚಿಸಲು ಸಾಧ್ಯವಾಗುತ್ತದೆ ಎಂದರು.

ಮೈಸೂರು ನಗರ ವ್ಯಾಪ್ತಿಯಲ್ಲಿ ಓವರ್ ಹೆಡ್ ಟ್ಯಾಂಕ್ ಗಳಿಗೆ ಪಂಪಿಂಗ್ ಸೇರಿದಂತೆ ಇತರೆ ವಿದ್ಯುದ್ಧೀಕರಣ ಕೆಲಸಗಳನ್ನು ದಿನಾಂಕ ನಿಗದಿಪಡಿಸಿಕೊಂಡು ಅಧಿಕಾರಿಗಳು ಕೆಲಸ ಪೂರ್ಣಗೊಳಿಸಬೇಕು. ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಬೇಕು ನಂತರ ವಿವಿಧ ಕೆಲಸಗಳಿಗೆ ನೀರು ಒದಗಿಸಬೇಕು ಎಂದು ನಿರ್ದೇಶನ ನೀಡಿದರು.

ಹನೂರು ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿದೆ. ಅರಣ್ಯ ಪ್ರದೇಶದ ಜನ ವಸತಿ ಇರುವ ಕಡೆಯೂ ಹೆಚ್ಚಿನ ತೊಂದರೆ ಇದೆ.ಜನರಿಗೆ ಶುದ್ದ ನೀರು ಒದಗಿಸಬೇಕಿದೆ. ನೀರು ಸರಬರಾಜು ಮಾಡುವ ಮೊದಲು ಶುದ್ದತೆ ಪರೀಕ್ಷೆ ಆಗಬೇಕು ಎಂದು ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರು ತಿಳಿಸಿದರು.

ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಶಾಸಕ ತನ್ವೀರ್ ಸೇಠ್ ಅವರು ಮಾತನಾಡಿ ಕುಡಿಯುವ ನೀರಿನ ಕೊರತೆ ಉಂಟಾದ ಸಂದರ್ಭದಲ್ಲಿ ಬೋರ್ ವೆಲ್ ಕೊರೆಯಲಾಗುತ್ತದೆ. ಸದರಿ ಬೋರ್ ವೆಲ್ ಗಳಿಗೆ ಚೆಸ್ಕಾಂ ವತಿಯಿಂದ ವಿದ್ಯುತ್ ಸಂಪರ್ಕ ನೀಡುವ ಕೆಲಸವನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕು ಎಂದರು.

ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ಹರೀಶ್ ಗೌಡ ಅವರು ಮಾತನಾಡಿ ಮೈಸೂರು ಮಹಾನಗರ ಪಾಲಿಕೆ ಅಧಿಕಾರಿಗಳು ಕುಡಿಯುವ ನೀರಿನ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರೊಂದಿಗೆ ಸಕಾರಾತ್ಮಕ ವಾಗಿ ಸ್ಪಂದಿಸಬೇಕು. ಕಾಮಗಾರಿ ನಡೆಯುವ ಸಂದರ್ಭಗಳಲ್ಲಿ ಕುಡಿಯುವ ನೀರಿನ ಪೈಪ್ ಲೈನ್ ಹೊಡೆದು ನೀರು ಪೋಲಾಗುವ ಸಾಧ್ಯತೆ ಇರುತ್ತದೆ, ಅಧಿಕಾರಿಗಳು ಎಚ್ಚರಿಕೆ ವಹಿಸಿದರೆ, ಕುಡಿಯುವ ನೀರು ಪೋಲಾಗದಂತೆ ನೋಡಿಕೊಳ್ಳಬಹುದು ಎಂದರು.

ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಜಿ ಅವರು ಮಾತನಾಡಿ ಬರ ಘೋಷಣೆಯಾದ ನಂತರ ಮಾತ್ರ ಕುಡಿಯುವ ನೀರಿನ ಕೊರತೆಗೆ ಎನ್.ಡಿ.ಆರ್.ಎಫ್ ನಲ್ಲಿ ನೀಡುವ ಅನುದಾನ ಬಳಸಬಹುದು. ಬರ ಘೋಷಣೆಯಾಗದ ಹಿನ್ನಲೆಯಲ್ಲಿ ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಲಭ್ಯವಿರುವ ಅನುದಾನ ಬಳಸಬೇಕು ಎಂದರು.ಮೈಸೂರು ನಗರ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ಬಗ್ಗೆ ಚರ್ಚಿಸಲು ಶಾಸಕರುಗಳ ಅಧ್ಯಕ್ಷತೆಯಲ್ಲಿ ಪ್ರತ್ಯೇಕ ಸಭೆ ನಡೆಸಲಾಗುವುದು ಎಂದರು.

ಸಭೆಯಲ್ಲಿ ವಿಧಾನಸಭಾ ಶಾಸಕರಾದ ರವಿಶಂಕರ್, ಶ್ರೀವತ್ಸ, ಗಣೇಶ್ ಪ್ರಸಾದ್, ಅನಿಲ್ ಚಿಕ್ಕಮಾಧು, ದರ್ಶನ್ ಧ್ರುವನಾರಾಯಣ, ವಿಧಾನ ಪರಿಷತ್ ಶಾಸಕ ಡಾ: ತಿಮ್ಮಯ್ಯ, ಚಾಮರಾಜನಗರ ಜಿಲ್ಲಾಧಿಕಾರಿ ಶ್ರೀ ರೂಪ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋಥ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮುತ್ತುರಾಜ್, ಮೈಸೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯುಕೇಶ್ ಕುಮಾರ್, ಮೈಸೂರು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಗ್ಗಂಪೂರಿನಲ್ಲಿ ಅಕ್ರಮ ಮರಳು ದಂಧೆ ಆರೋಪ: ಪಿತ್ರಾರ್ಜಿತ ಜಮೀನಿಗೆ ಅಕ್ರಮ ಪ್ರವೇಶ, ಲಕ್ಷಾಂತರ ನಷ್ಟದ ಆರೋಪ

**ಯಾದಗಿರಿ:ಜೂ.28:** ಗುರುಮಠಕಲ್ ತಾಲೂಕಿನ ಮಗ್ಗಂಪೂರ ಗ್ರಾಮದ ವ್ಯಾಪ್ತಿಯಲ್ಲಿ ಅಕ್ರಮ ಮರಳು ಗಣಿಗಾರಿಕೆ ಹಾಗೂ ಸಾಗಣೆ ನಡೆದಿದೆ ಎಂಬ ಗಂಭೀರ ಆರೋಪ ಕೇಳಿಬಂದಿದ್ದು, ಪಿತ್ರಾರ್ಜಿತ ಜಮೀನಿಗೆ ಅಕ್ರಮವಾಗಿ ಪ್ರವೇಶಿಸಿ ಅಪಾರ ಪ್ರಮಾಣದ ಮರಳು ತೆಗೆದುಕೊಂಡು ಹೋಗಲಾಗಿದೆ ಎಂದು ಜಮೀನು ಮಾಲೀಕ ಶಿವಪ್ಪ ತಂದೆ ಕಾಶಪ್ಪ ಬಟ್ಟಗೇರಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ದೂರು ಸಲ್ಲಿಸಿದ್ದಾರೆ.




ದೂರಿನ ಪ್ರಕಾರ, ಗುರುಮಠಕಲ್ ತಾಲೂಕಿನ ಪಸಪೂಲ್ ಗ್ರಾಮದ ಸೀಮೆ ವ್ಯಾಪ್ತಿಯಲ್ಲಿರುವ ಸರ್ವೆ ನಂ.128ರ ಜಮೀನು ತಮ್ಮ ಕುಟುಂಬದ ಪಿತ್ರಾರ್ಜಿತ ಆಸ್ತಿಯಾಗಿದ್ದು, ಕಾನೂನುಬದ್ಧ ಸ್ವಾಧೀನ ಹಾಗೂ ಮಾಲೀಕತ್ವ ತಮ್ಮದಾಗಿದೆ. ಆದರೂ ಯಾವುದೇ ಅನುಮತಿ ಪಡೆಯದೆ ಕೆಲವರು ಏಕಾಏಕಿ ಜಮೀನಿಗೆ ಪ್ರವೇಶಿಸಿ ಅಕ್ರಮವಾಗಿ ಮರಳು ತೆಗೆದು ಸಾಗಣೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ.

ಜೂನ್ 22 ಮತ್ತು ಜೂನ್ 26ರಂದು ಟ್ರಾಕ್ಟರ್‌ಗಳು, ಹಿಟಾಚಿ ಹಾಗೂ ಜೆಸಿಬಿ ಯಂತ್ರಗಳ ಸಹಾಯದಿಂದ ಬೃಹತ್ ಪ್ರಮಾಣದಲ್ಲಿ ಮರಳು ಸಾಗಣೆ ಮಾಡಲಾಗಿದೆ. ಈ ವೇಳೆ ಪ್ರಶ್ನಿಸಿದಾಗ ಬೆದರಿಕೆ ಹಾಕಿ, ದಬ್ಬಾಳಿಕೆ ನಡೆಸಿ, ತಮ್ಮ ಪ್ರಭಾವ ಬಳಸಿ ಮರಳು ಸಾಗಣೆ ಮುಂದುವರಿಸಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಈ ಅಕ್ರಮ ಚಟುವಟಿಕೆಯ ಹಿಂದೆ ಬಿಡ್ಡ ಕಮ್ ಬ್ಯಾರೇಜ್ ಕಾಮಗಾರಿಯ ಪ್ರಥಮ ದರ್ಜೆ ಗುತ್ತಿಗೆದಾರರಾದ ಗುರುರಾಜ ಕಣ್ಣಿ ಹಾಗೂ ಉಪಗುತ್ತಿಗೆದಾರ ಶರಣಗೌಡ ಅವರ ಕೈವಾಡವಿದೆ ಎಂದು ಆರೋಪಿಸಲಾಗಿದ್ದು, ಕಾಮಗಾರಿಗೆ ಬಳಸಿಕೊಳ್ಳುವ ಉದ್ದೇಶದಿಂದ ಸುಮಾರು 500 ಟಿಪ್ಪರ್‌ಗೂ ಅಧಿಕ ಮರಳನ್ನು ತಮ್ಮ ಜಮೀನಿನಿಂದ ಅಕ್ರಮವಾಗಿ ತೆಗೆದುಕೊಂಡು ಹೋಗಲಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಅಕ್ರಮ ಮರಳು ತೆಗೆಯುವ ಪರಿಣಾಮ ಸುಮಾರು 20 ಗುಂಟೆ ಜಮೀನು ಸಂಪೂರ್ಣವಾಗಿ ಹಾನಿಗೊಳಗಾಗಿದ್ದು, ಕೃಷಿ ಚಟುವಟಿಕೆಗಳಿಗೆ ತೀವ್ರ ಹೊಡೆತ ಬಿದ್ದಿದೆ. ಇದರಿಂದ ಲಕ್ಷಾಂತರ ರೂಪಾಯಿ ಆರ್ಥಿಕ ನಷ್ಟ ಉಂಟಾಗಿದೆ ಎಂದು ಜಮೀನು ಮಾಲೀಕರು ಆರೋಪಿಸಿದ್ದಾರೆ.

ಮರಳು ಸಾಗಣೆ ನಡೆಯುತ್ತಿದ್ದ ಸಂದರ್ಭದಲ್ಲಿ ಕುಟುಂಬದ ಸದಸ್ಯರಾದ ಮಲ್ಲಪ್ಪ ತಂದೆ ಮಹಾದೇವಪ್ಪ ಹಾಗೂ ಕಾಶಪ್ಪ ತಂದೆ ದೇವಿಂದ್ರಪ್ಪ ಅವರು ಸ್ಥಳದಲ್ಲಿದ್ದು, ಘಟನೆಗೆ ಸಾಕ್ಷಿಯಾಗಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಅಕ್ರಮ ಮರಳು ಗಣಿಗಾರಿಕೆ, ಜಮೀನಿಗೆ ಅತಿಕ್ರಮ ಪ್ರವೇಶ ಹಾಗೂ ಬೆದರಿಕೆ ಆರೋಪಗಳ ಕುರಿತು ಅಧಿಕಾರಿಗಳು ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಶಿವಪ್ಪ ಬಟ್ಟಗೇರಿ ಅವರು ಒತ್ತಾಯಿಸಿದ್ದಾರೆ.

ದೂರಿನೊಂದಿಗೆ ಅಕ್ರಮ ಮರಳು ಸಾಗಣೆ ಮಾಡಿರುವ ಟ್ರಾಕ್ಟರ್‌ಗಳ ಫೋಟೋ, ವಿಡಿಯೋ ಹಾಗೂ ಜಮೀನಿನ ಪಹಣಿ ದಾಖಲೆಗಳನ್ನು ಸಹ ಸಲ್ಲಿಸಲಾಗಿದೆ.

# ಮಾದಿಗ ಸಮಾಜದ ಏಳ್ಗೆ, ನ್ಯಾಯಕ್ಕಾಗಿ ಸದಾ ಹೋರಾಟ: ಸಮಾಜಕ್ಕೆ ಋಣಿಯಾಗಿರಬೇಕು:ಹಣಮಂತ ಲಿಂಗೇರಿ ಕರೆ

**ಯಾದಗಿರಿ: ಜೂ.28:**ಮಾದಿಗ ಸಮಾಜದ ಏಳ್ಗೆಗಾಗಿ ಪ್ರತಿಯೊಬ್ಬರೂ ಒಗ್ಗಟ್ಟಾಗಿ ಶ್ರಮಿಸಬೇಕು. ಸಮಾಜ ಎದುರಿಸುತ್ತಿರುವ ಸಮಸ್ಯೆಗಳಿಗೆ ನ್ಯಾಯ ದೊರಕಿಸುವ ಜವಾಬ್ದಾರಿ ಪ್ರತಿಯೊಬ್ಬ ಸಮಾಜ ಬಾಂಧವರ ಮೇಲಿದೆ ಎಂದು ಮಾಜಿ ತಾಲೂಕು ಪಂಚಾಯತ್ ಸದಸ್ಯ ಹಣಮಂತ ಲಿಂಗೇರಿ ಹೇಳಿದರು.

ನಗರದ ಹೊಸಳ್ಳಿ ಕ್ರಾಸ್‌ನ ಮಳಿಗೆಯೊಂದರಲ್ಲಿ ಸೈದಾಪುರ ವಲಯದ ಹಣಮಂತ ದೊಡ್ಡಮನಿ ಸೌರಾಷ್ಟ್ರಹಳ್ಳಿ ಅವರ ನೇತೃತ್ವದಲ್ಲಿ ಕರ್ನಾಟಕ ಮಾದಿಗ ಮಹಾಸಭಾ ಕ್ಷೇಮಾಭಿವೃದ್ಧಿ ಸಂಘಕ್ಕೆ ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳಿಗೆ ಹಮ್ಮಿಕೊಂಡಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಾದಿಗ ಸಮಾಜದ ಪ್ರತಿಯೊಂದು ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಸಮಾಜದ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಬೇಕು ಎಂದರು.

ಸಮಾಜದ ಒಳಿತಿಗಾಗಿ ಪ್ರತಿಯೊಬ್ಬರೂ ತಮ್ಮ ಜವಾಬ್ದಾರಿಯನ್ನು ಅರಿತು ಮುನ್ನಡೆಯಬೇಕು. ಸಮಾಜಕ್ಕೆ ಎದುರಾಗುವ ಅನ್ಯಾಯ, ತೊಂದರೆ ಹಾಗೂ ಸಮಸ್ಯೆಗಳ ಪರಿಹಾರಕ್ಕಾಗಿ ಒಗ್ಗಟ್ಟಿನ ಹೋರಾಟ ಅಗತ್ಯವಾಗಿದೆ ಎಂದು ಹೇಳಿದರು.

ಸ್ವಾತಂತ್ರ ಬಂದು ಹಲವು ದಶಕಗಳು ಕಳೆದರೂ ದಲಿತ ಸಮುದಾಯಗಳ ಮೇಲೆ ನಿಂದನೆ, ಕಿರುಕುಳ, ದೌರ್ಜನ್ಯ ಹಾಗೂ ಅನ್ಯಾಯದ ಘಟನೆಗಳು ಇನ್ನೂ ಮುಂದುವರಿದಿರುವುದು ವಿಷಾದಕರ ಸಂಗತಿ. ಇಂತಹ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಮಾದಿಗ ಸಮಾಜದವರು ಸಂಘಟಿತರಾಗಿ ಧ್ವನಿ ಎತ್ತಬೇಕು ಎಂದು



ಕರೆ ನೀಡಿದರು. ಈ ಸಂದರ್ಭದಲ್ಲಿ ಕರ್ನಾಟಕ ಮಾದಿಗ ಮಹಾಸಭಾ ಕ್ಷೇಮಾಭಿವೃದ್ಧಿ ಸಂಘದ ನೂತನ ರಾಜ್ಯ ಉಪಾಧ್ಯಕ್ಷ ಲಿಂಗಪ್ಪ ಹತ್ತಿಮನಿ, ರಾಜ್ಯ ಕಾರ್ಯದರ್ಶಿ ಚನ್ನಯ್ಯ ಮಾಳಿಕೇರಿ, ಜಿಲ್ಲಾ ಅಧ್ಯಕ್ಷ ಗೋಪಾಲ ದಾನಸಕೇರಿ ಸೇರಿದಂತೆ ನೂತನ ಪದಾಧಿಕಾರಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಜೆಡಿಎಸ್ ಮುಖಂಡ ತಾಯಪ್ಪ ಬದ್ದೇಪಲ್ಲಿ, ವಾಬಣ್ಣ ಕಡೇಚೂರು, ಸಾಬಣ್ಣ ಸೈದಾಪುರ, ಬೆಂಜಿಮೆನ್ ಹಿರೇನೂರು, ವಿಜಯ ಬೆಳಗುಂದಿ, ಶರಣಪ್ಪ ದೊಡ್ಡಮನಿ ಮುಷ್ಟೂರು, ಸಾಮುವೇಲ್ ಕಣೇಕಲ್, ಸಂಗನಬಸ್ಸು ಬಾಚವಾರ, ಸಾಬು, ಹೊರುಂಚ ಸೇರಿದಂತೆ ಸಮಾಜದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# 15 ರಾಜ್ಯಗಳಿಗೆ ಹೊಸ ಎಚ್ಚರಿಕೆ



**ನವದೆಹಲಿ,ಜೂ.29:**-ದೇಶದ ಹವಾಮಾನವು ಪ್ರಮುಖ ಬದಲಾವಣೆಗೆ ಒಳಗಾಗಲಿದೆ. ಹವಾಮಾನ ಇಲಾಖೆ ದೆಹಲಿ, ಉತ್ತರ ಪ್ರದೇಶ, ಬಿಹಾರ ಮತ್ತು ರಾಜಸ್ಥಾನ ಸೇರಿದಂತೆ 15 ರಾಜ್ಯಗಳಿಗೆ ಹೊಸ ಎಚ್ಚರಿಕೆಯನ್ನು ನೀಡಿದೆ. ನಿರಂತರ ಧಾರಾಕಾರ ಮಳೆಯು ಅಸ್ಸಾಂ ಮತ್ತು ಅರುಣಾಚಲ ಪ್ರದೇಶದಂತಹ ಈಶಾನ್ಯ ರಾಜ್ಯಗಳಲ್ಲಿ ತೀವ್ರ ಪ್ರವಾಹದಂತಹ ಪರಿಸ್ಥಿತಿಯನ್ನು ಸೃಷ್ಟಿಸಿದ್ದರೆ ರಾಷ್ಟ್ರ ರಾಜಧಾನಿ ದೆಹಲಿ ಮತ್ತು ರಾಜಸ್ಥಾನ ಸೇರಿದಂತೆ ಹಲವಾರು ರಾಜ್ಯಗಳ ಜನರು ಇನ್ನೂ ತೀವ್ರ ಬಿಸಿಲಿನಿಂದ ಬಳಲುತ್ತಿದ್ದಾರೆ.

ಹವಾಮಾನ ಇಲಾಖೆಯ ಪ್ರಕಾರ, ಮುಂದಿನ 12 ಗಂಟೆಗಳಲ್ಲಿ 15 ರಾಜ್ಯಗಳಲ್ಲಿ ಹವಾಮಾನವು ತೀವ್ರವಾಗಿ ಬದಲಾಗಲಿದೆ. ಈ ಸಮಯದಲ್ಲಿ, ಗಂಟೆಗೆ 70 ಕಿಲೋಮೀಟರ್ ವೇಗದಲ್ಲಿ ಬಲವಾದ ಗಾಳಿ ಬೀಸುವ ಮತ್ತು ಅನೇಕ ಪ್ರದೇಶಗಳಲ್ಲಿ ಭಾರೀ ಮಳೆಯಾಗುವ ನಿರೀಕ್ಷೆಯಿದೆ.ಉತ್ತರ ತೆಲಂಗಾಣ ಮತ್ತು ಪಕ್ಕದ ಪ್ರದೇಶಗಳಲ್ಲಿ ಪ್ರಸ್ತುತ ಚಂಡಮಾರುತದ ಪರಿಚಲನೆ ಸಕ್ರಿಯವಾಗಿದ್ದು, ಸಮುದ್ರ ಮಟ್ಟದಿಂದ ಹೆಚ್ಚಿನ ಎತ್ತರಕ್ಕೆ ವಿಸ್ತರಿಸಿದೆ. ಹೆಚ್ಚುವರಿಯಾಗಿ, ಪಶ್ಚಿಮ-ಮಧ್ಯ ಬಂಗಾಳ ಕೊಲ್ಲಿ ಮತ್ತು ಪಕ್ಕದ ಕರಾವಳಿ ಆಂಧ್ರಪ್ರದೇಶದ ಮೇಲೆ ಎರಡನೇ ಚಂಡಮಾರುತದ ಪರಿಚಲನೆಯೂ ಇದೆ.

ಬಂಗಾಳಕೊಲ್ಲಿಯ ಈಶಾನ್ಯ ಮತ್ತು ಮ್ಯಾನ್ಮಾರ್ ಕರಾವಳಿಯ ಬಳಿ ರೂಪುಗೊಂಡಿರುವ ಚಂಡಮಾರುತವು ಈಗ ಸ್ವಲ್ಪ ದುರ್ಬಲಗೊಂಡಿದ್ದರೂ, ಈ ಹವಾಮಾನ ವ್ಯವಸ್ಥೆಗಳ ಪ್ರಭಾವವು ದೇಶದ ಹೆಚ್ಚಿನ ಭಾಗಗಳಲ್ಲಿ ಭಾರೀ ಮಳೆ ಮತ್ತು ಬಲವಾದ ಗಾಳಿಯನ್ನು ತರುವ ನಿರೀಕ್ಷೆಯಿದೆ. ದೆಹಲಿ, ಉತ್ತರ ಪ್ರದೇಶ, ಬಿಹಾರ, ರಾಜಸ್ಥಾನ, ಮಧ್ಯಪ್ರದೇಶ, ಮಹಾರಾಷ್ಟ್ರ, ಹಿಮಾಚಲ ಪ್ರದೇಶ, ಉತ್ತರಾಖಂಡ, ಹರಿಯಾಣ, ಪಂಜಾಬ್, ಜಮ್ಮು ಮತ್ತು ಕಾಶ್ಮೀರ, ಛತ್ತೀಸ್‌ಗಢ, ಕೇರಳ, ತಮಿಳುನಾಡು ಮತ್ತು ಅಸ್ಸಾಂ ಸೇರಿದಂತೆ 15 ರಾಜ್ಯಗಳಿಗೆ ಎಚ್ಚರಿಕೆ ನೀಡಲಾಗಿದೆ.

ಹವಾಮಾನ ಇಲಾಖೆಯು ಮುಂಬರುವ ದಿನಗಳಲ್ಲಿ ದೆಹಲಿ-ಎನ್‌ಸಿಆರ್‌ಗೆ ಹಳದಿ ಎಚ್ಚರಿಕೆ ನೀಡಿದೆ. ಇಲಾಖೆಯ ಪ್ರಕಾರ, ರಾಜಧಾನಿಯ ಆಕಾಶವು ಮಂಗಳವಾರ ಮತ್ತು ಬುಧವಾರ ಮೋಡ ಕವಿದಿರುತ್ತದೆ, ಭಾರೀ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಜುಲೈ 1 ರ ನಂತರ ಮಳೆ ಮತ್ತಷ್ಟು ಹೆಚ್ಚಾಗುವ ನಿರೀಕ್ಷೆಯಿದೆ, ಇದು ತಾಪಮಾನದಲ್ಲಿ ಗಮನಾರ್ಹ ಇಳಿಕೆ ಮತ್ತು ಆಹ್ಲಾದಕರ ಹವಾಮಾನಕ್ಕೆ ಕಾರಣವಾಗುತ್ತದೆ

ನೆರೆಯ ಉತ್ತರ ಪ್ರದೇಶದಲ್ಲಿ ಹವಾಮಾನ ಇಲಾಖೆ ಭಾರೀ ಮಳೆಯ ಎಚ್ಚರಿಕೆ ನೀಡಿದೆ.ದಕ್ಷಿಣ ಭಾರತದಲ್ಲಿ, ಕೇರಳದಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಕಿತ್ತಳೆ ಎಚ್ಚರಿಕೆ ನೀಡಿದೆ. ಕಾಸರಗೋಡು, ಕಣ್ಣೂರು, ವಯನಾಡ್ ಮತ್ತು ಕೋಝಿಕ್ಕೋಡ್ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ನಿರೀಕ್ಷೆಯಿದ್ದರೆ, ಉಳಿದ 10 ಜಿಲ್ಲೆಗಳಲ್ಲಿ ಹಳದಿ ಎಚ್ಚರಿಕೆ ಇನ್ನೂ ಜಾರಿಯಲ್ಲಿದೆ. ರಾಜ್ಯದ ಕೆಲವು ಭಾಗಗಳಲ್ಲಿ 12 ರಿಂದ 20 ಸೆಂಟಿಮೀಟರ್‌ಗಳಷ್ಟು ಭಾರೀ ಮಳೆಯಾಗುವ ನಿರೀಕ್ಷೆಯಿದೆ. ತಮಿಳುನಾಡಿನಲ್ಲಿ, ಚೆನ್ನೈ, ನೀಲಗಿರಿ, ಥೇಣಿ, ದಿಂಡಿಗಲ್ ಮತ್ತು ತಿರುವಲ್ಲೂರು ಸೇರಿದಂತೆ ಹಲವಾರು ಜಿಲ್ಲೆಗಳಲ್ಲಿ ಬಲವಾದ ಗಾಳಿಯೊಂದಿಗೆ ಧಾರಾಕಾರ ಮಳೆಯಾಗುವ ನಿರೀಕ್ಷೆಯಿದೆ. ಕೊಯಮತ್ತೂರಿನ ಗುಡ್ಡಗಾಡು ಪ್ರದೇಶಗಳಲ್ಲಿಯೂ ಭಾರೀ ಮಳೆಯಾಗುವ ನಿರೀಕ್ಷೆಯಿದ್ದರೆ, ಚೆನ್ನೈನಲ್ಲಿ ತಾಪಮಾನ ಸಾಮಾನ್ಯ ಮಟ್ಟದಲ್ಲಿಯೇ ಇರುತ್ತದೆ.

# ಬಡವರ ಶೋಷಿತರ ಮತದ ಹಕ್ಕು ಕಿತ್ತುಕೊಳ್ಳುವದೇ ಎಸ್ ಐ ಆರ್ ಹುನ್ನಾರ




**ಜೇವರ್ಗಿ :ಜೂ.29:**ಬಡವರ ಶೋಷಿತರ ಮತದ ಹಕ್ಕು ಕಿತ್ತುಕೊಳ್ಳುವದೇ ಎಸ್ ಐ ಆರ್ ಹುನ್ನಾರ್

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಸ್ಕರಣೆಯ ಹೆಸರಿನಲ್ಲಿ ಬಡವರ ಶೋಷಿತರ ಮತದಾನದ ಹಕ್ಕು ಕಸಿಯುವ ವ್ಯವಸ್ಥಿತ ಹುನ್ನಾರ ಚುನಾವಣೆ ಆಯೋಗದ ಮೂಲಕ ನಡೆಸಲಾಗುತ್ತಿದೆ ಎಂದು ಜೇವರ್ಗಿ ಕರ್ನಾಟಕ ಸರಕಾರ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಶೌಕತ್ ಅಲಿ ಆಲೂರ್ ಹೇಳಿದ್ದಾರೆ

ಜೇವರ್ಗಿ ತಾಲೂಕು ನಮ್ಮೂರು ಮುತ್ತಕೂಡ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಯೋಜನೆಗಳ ಜನಜಾಗೃತಿಗಾಗಿ ಗ್ಯಾರಂಟಿ ನಡೆ ಹಳ್ಳಿ ಕಡೆ ಎನ್ನುವ ಘೋಷಣೆ ಅಡಿಯಲ್ಲಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು ಈ ಸಂದರ್ಭದಲ್ಲಿ ತಾಲೂಕ ಗ್ಯಾರಂಟಿ ಸಮಿತಿ ಸದಸ್ಯರು ಗ್ರಾಮದ ಹಿರಿಯರು ಮಹಿಳೆಯರು ಯುವಕರು ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು

# ಕಡೇಚೂರ ಗ್ರಾಮದಲ್ಲಿ ಸಡಗರದ ಕಾರಹುಣ್ಣಿಮೆ ಎತ್ತುಗಳ ಭವ್ಯ ಮೆರವಣಿಗೆ

**ಗುರುಮಠಕಲ್:ಜೂ.29:**ರೈತರ ಜೀವನಾಡಿಯೂ, ಕೃಷಿ ಸಂಸ್ಕೃತಿಯ ಹೆಮ್ಮೆಯ ಹಬ್ಬವೂ ಆದ ಕರಾಹುಣ್ಣಿಮೆಯನ್ನು ಇಂದು ಗ್ರಾಮೀಣ ಭಾಗದಲ್ಲಿ ಅತ್ಯಂತ ಸಡಗರ-ಸಂಭ್ರಮದಿಂದ ರೈತರು ಆಚರಿಸುತ್ತಿದ್ದಾರೆ. ಕಡೆಚೂರ ಗ್ರಾಮದಲ್ಲಿ ಮುಂಜಾನೆಯಿಂದಲೇ ಹಬ್ಬದ ವಾತಾವರಣ ಮನೆಮಾಡಿದ್ದು, ರೈತರು ತಮ್ಮ ಆರಾಧ್ಯ ದೈವದಂತಿರುವ ಎತ್ತುಗಳನ್ನು ಸಿಂಗರಿಸುವಲ್ಲಿ ನಿರತರಾಗಿದ್ದರು. ಎತ್ತುಗಳಿಗೆ ವಿಶೇಷ ಶೃಂಗಾರ, ಸಿರೆ ರಂಗು, ರೈತರ ಹಬ್ಬ ಎಂದೇ ಖ್ಯಾತಿ ಪಡೆದಿರುವ ಕರಾಹುಣ್ಣಿಮೆಯ ಅಂಗವಾಗಿ ಗ್ರಾಮದ ರೈತರು ತಮ್ಮ ಎತ್ತುಗಳನ್ನು ಸ್ವಚ್ಛವಾಗಿ ತೊಳೆದು, ಕೊಂಬುಗಳಿಗೆ ಬಣ್ಣ ಹಚ್ಚಿ, ಜೂಲ ಹಾಗೂ ಗೆಜ್ಜೆ ಸರಗಳಿಂದ ಮನಮೋಹಕವಾಗಿ ಅಲಂಕರಿಸಿದ್ದರು. ವಿಶೇಷವಾಗಿ ಎತ್ತುಗಳ ದೇಹದ ಮೇಲೆ ವಿವಿಧ ಚಿತ್ತಾರಗಳನ್ನು ಬಿಡಿಸಿ, 'ಸಿರೆ ರಂಗು'ಗಳನ್ನು ಹಚ್ಚುವ ಮೂಲಕ ಎತ್ತುಗಳ ಜೋಡಿಗೆ ರಾಜ ಗಾಂಭೀರ್ಯದ ಕಳೆಯನ್ನು ನೀಡಲಾಗಿತ್ತು. ಸಾಯಂಕಾಲ ಭವ್ಯ ಮೆರವಣಿಗೆ ಹಬ್ಬದ ಮುಖ್ಯ ಆಕರ್ಷಣೆಯಾಗಿ ಸಾಯಂಕಾಲ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಶೃಂಗಾರಗೊಂಡ ಎತ್ತುಗಳ ಜೋಡಿಗಳ ಭವ್ಯ ಮೆರವಣಿಗೆಯನ್ನು ಆಯೋಜಿಸಲಾಗುತ್ತದೆ.

ಡೊಳ್ಳು ಕುಣಿತ, ತಮಟೆ ಹಾಗೂ ಮಂಗಳ ವಾದ್ಯಗಳ ನಾದಕ್ಕೆ ತಕ್ಕಂತೆ ರೈತರು ತಮ್ಮ ಎತ್ತುಗಳನ್ನು ಉತ್ಸಾಹದಿಂದ ಮುನ್ನಡೆಸುತ್ತಾರೆ.

ಗ್ರಾಮಸ್ಥರ ಭಾಗಿ ಮೆರವಣಿಗೆಯುದ್ದಕ್ಕೂ ಹಿರಿಯರು, ಮಹಿಳೆಯರು ಮತ್ತು ಮಕ್ಕಳು ರಸ್ತೆಯ ಇಕ್ಕೆಲಗಳಲ್ಲಿ ನಿಂತು ಎತ್ತುಗಳಿಗೆ ಪೂಜೆ ಸಲ್ಲಿಸಿ, ಹಬ್ಬದ ಸಂಭ್ರಮವನ್ನು ಕಣ್ತುಂಬಿಕೊಂಡರು.



ಸಂಭ್ರಮದ ವಾತಾವರಣ ಒಟ್ಟಾರೆಯಾಗಿ ಕಡೆಚೂರ ಗ್ರಾಮದಲ್ಲಿ ಕರಾಹುಣ್ಣಿಮೆ ಹಬ್ಬವು ರೈತರ ಮತ್ತು ಮೂಕ ಪ್ರಾಣಿಗಳ ನಡುವಿನ ಅನನ್ಯ ಬಾಂಧವ್ಯವನ್ನು ಎತ್ತಿ ಹಿಡಿಯುವಂತೆ ಯಶಸ್ವಿಯಾಗಿ ಜರುಗಿತು.

ರೈತರ ಮಾತು: "ವರ್ಷವಿಡೀ ಭೂಮಿತಾಯಿಯನ್ನು ನಂಬಿ ದುಡಿಯುವ ನಮಗೆ ನಮ್ಮ ಎತ್ತುಗಳೇ ದೇವರು. ಮಳೆ-ಬೆಳೆ ಚನ್ನಾಗಿ ಆಗಲಿ ಎಂದು ಪ್ರಾರ್ಥಿಸಿ, ಈ ದಿನ ನಮ್ಮ ಶಕ್ತಿ ಮೀರಿ ಎತ್ತುಗಳನ್ನು ಸಿಂಗರಿಸಿ ಹಬ್ಬ ಆಚರಿಸುತ್ತೇವೆ." ನಾಗಪ್ಪ ಸಜ್ಜನ ಕಡೆಚೂರ.

# ಮನ್ ಕೀ ಬಾತ್‌ನಲ್ಲಿ ಆತ್ಮನಿರ್ಭರ ಭಾರತದ ಸಂಕಲ್ಪ ಪ್ರತಿಧ್ವನಿಸಿದೆ



**ಯಾದಗಿರಿ:ಜೂ.29:**ಪ್ರಧಾನಿ ನರೇಂದ್ರ ಮೋದಿ ಅವರ "ಮನ್ ಕೀ ಬಾತ್" ಕಾರ್ಯಕ್ರಮವು ದೇಶದ ಸಾಧನೆಗಳು, ಜನರ ಯಶೋಗಾಥೆಗಳು ಹಾಗೂ ಆತ್ಮನಿರ್ಭರ ಭಾರತದ ಸಂಕಲ್ಪವನ್ನು ಜನರಿಗೆ ತಲುಪಿಸುವ ಮಹತ್ವದ ವೇದಿಕೆಯಾಗಿದೆ ಎಂದು ಬಿಜೆಪಿ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಮಹೇಶರೆಡ್ಡಿ ಮುದ್ನಾಳ ಹೇಳಿದರು.

ನಗರದ ವಾರ್ಡ್ ನಂ.11ರ ಮಹಿಪಾಲರೆಡ್ಡಿ ಅವರ ಮನೆಯಲ್ಲಿ ಭಾನುವಾರ ಪ್ರಧಾನಿ ನರೇಂದ್ರ ಮೋದಿ ಅವರ 135ನೇ "ಮನ್ ಕೀ ಬಾತ್" ಕಾರ್ಯಕ್ರಮದ ನೇರಪ್ರಸಾರ ವೀಕ್ಷಿಸಿದ ಬಳಿಕ ಅವರು ಮಾತನಾಡಿದರು.

"ಮನ್ ಕೀ ಬಾತ್" ಕೇವಲ ಒಂದು ಕಾರ್ಯಕ್ರಮವಲ್ಲ, ಇದು ದೇಶದ ಜನರೊಂದಿಗೆ ನೇರ ಸಂವಾದ ನಡೆಸುವ, ಸಾಧಕರ ಸಾಧನೆಗಳನ್ನು ಪರಿಚಯಿಸುವ ಹಾಗೂ ರಾಷ್ಟ್ರಭಕ್ತಿ ಮತ್ತು ಜನಸಹಭಾಗಿತ್ವದ ಭಾವನೆ ಮೂಡಿಸುವ ವಿಶಿಷ್ಟ ಪ್ರಯತ್ನವಾಗಿದೆ ಎಂದು ಹೇಳಿದರು.

ಭಾರತದಲ್ಲಿಯೇ ಅಭಿವೃದ್ಧಿಪಡಿಸಲಾದ ಜ್ಞಾನಾಸ್ತ್ರ ಕ್ಷಿಪಣಿಯ ಯಶಸ್ವಿ ಪರೀಕ್ಷೆ ಹಾಗೂ ಭಾರತೀಯ ನೌಕಾಪಡೆಗೆ ಐಎನ್‌ಎಸ್ ದುನಾಗಿರಿ, ಐಎನ್‌ಎಸ್ ಸಂಶೋಧಕ ಮತ್ತು ಐಎನ್‌ಎಸ್ ಅಗ್ರಯ್ ಯುದ್ಧನೌಕೆಗಳ ಸೇರ್ಪಡೆಯಿಂದ ದೇಶದ ರಕ್ಷಣಾ ಸಾಮರ್ಥ್ಯ ಮತ್ತಷ್ಟು ಬಲಗೊಂಡಿದೆ. ಪ್ರಧಾನಿ ಮೋದಿ ಅವರು ಈ ಸಾಧನೆಗಳನ್ನು ದೇಶದ ಜನತೆಗೆ ತಿಳಿಸಿರುವುದು ಪ್ರತಿಯೊಬ್ಬ ಭಾರತೀಯನಿಗೂ ಹೆಮ್ಮೆಯ ವಿಷಯವಾಗಿದೆ ಎಂದರು.

ದೇಶದಲ್ಲಿಯೇ ನಿರ್ಮಾಣವಾಗುತ್ತಿರುವ ಸಿ-295 ಸಾರಿಗೆ ವಿಮಾನದ ಯಶಸ್ವಿ ಹಾರಾಟ ಹಾಗೂ 40 ವಿಮಾನಗಳ ಉತ್ಪಾದನೆ ನಡೆಯುತ್ತಿರುವುದು ಮೇಕ್ ಇನ್ ಇಂಡಿಯಾ ಮತ್ತು ಆತ್ಮನಿರ್ಭರ ಭಾರತದ ಪರಿಕಲ್ಪನೆಯ ಯಶಸ್ಸಿಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ವೈಜ್ಞಾನಿಕ ಮನೋಭಾವ ಬೆಳೆಸಿಕೊಂಡು ಮೂಢನಂಬಿಕೆಗಳಿಂದ ದೂರ ಉಳಿಯಬೇಕು ಎಂಬ ಪ್ರಧಾನಿ ಅವರ ಸಂದೇಶ ಸಮಾಜದ ಪ್ರಗತಿಗೆ ಅಗತ್ಯವಾಗಿದೆ. ಚಿನ್ನದ ಮರುಬಳಕೆ, ಇಂಧನ ಉಳಿತಾಯ ಸೇರಿದಂತೆ ಜನಪರ ಕಾರ್ಯಗಳಲ್ಲಿ ತೊಡಗಿರುವ ನಾಗರಿಕರನ್ನು ಪ್ರಧಾನಿ ಅಭಿನಂದಿಸಿರುವುದು ಅವರ ಜನಪರ ಕಾಳಜಿಯನ್ನು ತೋರಿಸುತ್ತದೆ ಎಂದು ಮಹೇಶರೆಡ್ಡಿ ಮುದ್ನಾಳ ಅಭಿಪ್ರಾಯಪಟ್ಟರು.

ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ದೇಶ ಮತ್ತಷ್ಟು ಅಭಿವೃದ್ಧಿ ಹೊಂದಲು ಪ್ರತಿಯೊಬ್ಬರೂ ಸಹಕಾರ ನೀಡಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ನಗರ ಮಂಡಲ ಅಧ್ಯಕ್ಷ ಲಿಂಗಪ್ಪ ಹತ್ತಿಮನಿ, ಪ್ರಧಾನ ಕಾರ್ಯದರ್ಶಿ ರಮೇಶ್ ದೊಡ್ಡಮನಿ, ಮಲ್ಲಿಕಾರ್ಜುನ ಕಟ್ಟಿಮನಿ, ರವಿ ಭಾಪೂರೆ, ಮಾರುತಿ ಕಲಾಲ್, ಸುಗರೆಡ್ಡಿ, ನಗರಸಭೆ ಸದಸ್ಯ ಸ್ವಾಮಿದೇವ ದಾಸನಕೇರಿ, ಮಹದೇವಪ್ಪ ಗಣಪುರ, ನಾಗಪ್ಪ ಬೆನಕಲ್, ರಮೇಶ್ ಕೋಟಿಮನಿ, ಬಸವರಾಜಪ್ಪ ವಡೇಗೇರಾ, ಕಲ್ಲಪ್ಪ ಕೊಂಡಗುಳ್ಳಿ, ಶಿವಣ್ಣ ಬಡಿಗೇರ, ಶ್ರೀನಾಥ ಜೈನ್, ಪವನ್ ಲಿಂಗೇರಿ, ಯುವ ಮೋರ್ಚಾ ಅಧ್ಯಕ್ಷ ಅಜಯ್ ಮಡ್ಡಿ, ಕರಣ್ ಸುಮ್ರ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸುಸ್ಥಿರ ಸಮಾಜ ನಿರ್ಮಾಣದಲ್ಲಿ ಮಹಿಳೆಯರ ಪಾತ್ರ ಹಿರಿದು: ವಡವಟ್

**ಸೈದಾಪುರ:ಜೂ.29:** ಮಹಿಳೆಯರು ತಮ್ಮ ಮತ್ತು ಕುಟುಂಬದ ಸದಸ್ಯರ ಆರೋಗ್ಯ ಹಾಗೂ ಮಕ್ಕಳ ಶಿಕ್ಷಣದ ಕಡೆ ಹೆಚ್ಚಿನ ಗಮನ ಹರಿಸಬೇಕು.ಇದರಿಂದ ಆರೋಗ್ಯಕರ ಮತ್ತು ಸುಸ್ಥಿರ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದು ವಿಕಾಸ ಅಕಾಡೆಮಿಯ ಜಿಲ್ಲಾ ಸಂಚಾಲಕ ಭೀಮಣ್ಣ ವಡವಟ್ ಅಭಿಪ್ರಾಯಪಟ್ಟರು

ಪಟ್ಟಣದ ವಾಸವಿ ವಿದ್ಯಾ ಸಂಸ್ಥೆ ಆವರಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ವತಿಯಿಂದ ಜ್ಞಾನ ವಿಕಾಸ ಕಾರ್ಯಕ್ರಮದಡಿ ಆಯೋಜಿಸಿದ್ದ ಕೇಂದ್ರ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಮನೆಯ ಕುಟುಂಬದ ಸದಸ್ಯರು ಹಾಗೂ ಮನೆಯ ಸುತ್ತಮುತ್ತಲಿನ ವಾತಾವರಣ ಸಾಮರಸ್ಯದಿಂದ ಕೂಡಿರಲು ಮಹಿಳೆಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಮಹಿಳೆಯರು ಸದಾ ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸಬೇಕು ಎಂದು ಹೇಳಿದರು.

ಜ್ಞಾನ ವಿಕಾಸ ಸಮನ್ವಯಾಧಿಕಾರಿ ಲಕ್ಷ್ಮೀ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಸಂಘದ ವಿವಿಧ ಯೋಜನೆಗಳು ಹಾಗೂ ಜ್ಞಾನ ಸಂಪತ್ತನ್ನು ಹೆಚ್ಚಿಸಿಕೊಳ್ಳುವ ಮಾರ್ಗಗಳ ಕುರಿತು ಮಹಿಳೆಯರಿಗೆ ಮಾಹಿತಿ ನೀಡಿದರು.

ಸಂಪನ್ಮೂಲ ವ್ಯಕ್ತಿಯಾಗಿ ಶಿಕ್ಷಕಿ ಆರತಿ ಕುಲಕರ್ಣಿ, ಸಂಘದ ವಲಯ ಮೇಲ್ವಿಚಾರಕ



ಬೀರಪ್ಪ, ಒಕ್ಕೂಟದ ಅಧ್ಯಕ್ಷೆ ರೇಣುಕಾ, ಕಮಲ ಕುಲಕರ್ಣಿ, ಜ್ಞಾನ ವಿಕಾಸದ ಲಕ್ಷ್ಮಿ, ಸೇವಾಪ್ರತಿನಿಧಿ ರೇಣುಕಾ, ಪಲ್ಲವಿ ಸೇರಿದಂತೆ ಸಂಘದ ಸದಸ್ಯರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE